ಸಂಪುಟ : 10 ಸಂಚಿಕೆ: 41 ಪುಟ : 4+2 ಬೆಲೆ: 3.00 ಗುರುವಾರ ಮಾರ್ಚ್ 13 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 41 Pages : 4+2 Price : 3.00 Thursday March 13 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ವರ್ಷದೊಳಗೆ ಮನೆ ನಿರ್ಮಾಣ ಕಾರ್ಯ ಪೂರ್ಣ

■ ವಿಜಯಸಾಕ್ಷಿ ಸುದ್ದಿ, ಗದಗ



ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಮಂಜೂರಾದ 3859ರಲ್ಲಿ 3630 ಮನೆಗಳ ನಿರ್ಮಾಣ ಕಾರ್ಯ ಪ್ರಾರಂಭವಾಗಿದ್ದು , ಇವುಗಳನ್ನು ಒಂದು ವರ್ಷದಲ್ಲಿ ಪೂರ್ಣಗೊಳಿಸುವುದಾಗಿ ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರಾದ ಬಿ.ಝಡ್. ಜಮೀರ್ ಅಹ್ಮದಖಾನ್‌ರವರು ಪರಿಷತ್ತಿನಲ್ಲಿ ಭರವಸೆ ನೀಡಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಎಸ್.ವಿ ಸಂಕನೂರ ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಬಿಜೆಪಿ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ ಅವರು ಕೇಳಿದ ಚುಕ್ಕೆ ಗುರುತಿನ ಪ್ರಶ್ನೆಗೆ ಸಚಿವರು ಉತ್ತರಿಸುತ್ತ, ಗುಂಪು ಮನೆ ಯೋಜನೆಯಡಿ ನಿರ್ಮಾಣಗೊಳ್ಳುತ್ತಿರುವ ಮನೆಗಳಲ್ಲಿ ಈಗಾಗಲೇ 248 ಮನೆಗಳನ್ನು ಪೂರ್ಣಗೊಳಿಸಿ ಹಂಚಿಕೆ ಮಾಡಲಾಗಿದ್ದು, ಉಳಿದ ಮನೆಗಳ ನಿರ್ಮಾಣ ಕಾರ್ಯವನ್ನು ಪೂರ್ಣಗೊಳಿಸಿ ಮೂರು ಹಂತಗಳಲ್ಲಿ ವಿತರಣೆ ಮಾಡಲು ನಿರ್ಣಯಿಸಲಾಗಿದೆ. ಅದರಲ್ಲಿ ಮೊದಲನೇ ಹಂತದಲ್ಲಿ 987 ಮನೆಗಳನ್ನು ವಿತರಿಸಲಾಗುವುದೆಂದು ತಿಳಿಸಿದ್ದಾರೆ.

ಇದಲ್ಲದೇ ಫಲಾನುಭವಿಗಳು ಬಡವರಾಗಿದ್ದು, ತಮ್ಮ ವಂತಿಕೆಯ ಹಣ ರೂ. 4.5 ಲಕ್ಷ ಕೊಡುವಲ್ಲಿ ತೊಂದರೆ ಆಗುವುದೆಂದು ಗಮನಿಸಿ ಈ ಹಣವನ್ನೂ ಸರ್ಕಾರವೇ ಭರಿಸಲು ಮುಖ್ಯಮಂತ್ರಿಗಳು 500 ಕೋಟಿ ರೂ ಬಿಡುಗಡೆ ಮಾಡಿದ್ದಾರೆಂದು ಸಚಿವರು ಉತ್ತರಿಸಿ, ಮನೆ ಹಂಚಿಕೆಗಳಲ್ಲಿ ಏನಾದರೂ ವ್ಯತ್ಯಾಸವಾಗಿದ್ದರೆ ಅದನ್ನು ಸರಿಪಡಿಸುವ ಭರವಸೆಯನ್ನು ನೀಡಿದ್ದಾರೆಂದು ಎಸ್.ವಿ. ಸಂಕನೂರ ತಿಳಿಸಿದ್ದಾರೆ.

## ರಂಗ ಪಂಚಮಿ: ವಿದ್ಯಾರ್ಥಿಗಳಿಗೆ ಬಣ್ಣ ಎರಚದಂತೆ ಸೂಚನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಹೋಳಿ ಹಬ್ಬದ ಪ್ರಯುಕ್ತ ದಿ.18-3-2025ರಂದು ರಂಗ ಪಂಚಮಿ ಇರುವ ಕಾರಣ ದ್ವಿತಿಯ ಪಿಯುಸಿ ವಾರ್ಷಿಕ ಪರೀಕ್ಷೆ ಜರುಗುತ್ತಿರುವದರಿಂದ ಅಂದು ವಿವಿಧ ಕಡೆಗಳಿಂದ ಗದಗ-ಬೆಟಗೇರಿ ಮತ್ತು ಲಕ್ಷ್ಮೇಶ್ವರ ಶಹರದ ಪರೀಕ್ಷಾ ಕೇಂದ್ರಗಳಿಗೆ ಪರೀಕ್ಷೆ ಬರೆಯಲು ವಿವಿಧ ಕಡೆಗಳಿಂದ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ಬರುವ / ಹೋಗುವ ಕಾಲಕ್ಕೆ ಅವರಿಗೆ ಬಣ್ಣ ಎರಚದಂತೆ ಹಾಗೂ ವಿದ್ಯಾರ್ಥಿಗಳಿಗೆ ಅಡೆತಡೆಯಾಗದಂತೆ ಹೋಳಿ ಹಬ್ಬ ಆಚರಿಸಲು ಗದಗ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಶ್ರೀ ಜ. ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮದಲ್ಲಿ ಸಚಿವ ಎಚ್.ಕೆ. ಪಾಟೀಲ

# ಲೋಕಕಲ್ಯಾಣಕ್ಕಾಗಿ ಶ್ರಮಿಸಿದ ಜಗದ್ಗುರು ರೇಣುಕಾಚಾರ್ಯರು

■ ವಿಜಯಸಾಕ್ಷಿ ಸುದ್ದಿ, ಗದಗ

ಕಲಿಯುಗದಲ್ಲಿ ವೀರಶೈವ ಧರ್ಮವನ್ನು ಬೋಧಿಸಲು ಬಂದ ಆಚಾರ್ಯರಲ್ಲಿ ಜಗದ್ಗುರು ರೇಣುಕಾಚಾರ್ಯರು ಒಬ್ಬರು. ಅವರು ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂದು ಸಾರಿದ ಮಹಾಮಹಿಮರಾಗಿದ್ದಾರೆ ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ತಿಳಿಸಿದರು.

ನಗರದ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೀರೇಶ್ವರ ಪುಣ್ಯಾಶ್ರಮದ ಶಿವಕುಮಾರ ಶಾಸ್ತ್ರಿಗಳು ಉಪನ್ಯಾಸ ನೀಡಿ, ಜಗದ್ಗುರು ರೇಣುಕಾಚಾರ್ಯರು ಅಧರ್ಮಿಗಳಿಂದ ಧರ್ಮ ಪರಿಪಾಲನೆ ಮಾಡಿದವರು. ರೇಣುಕಾಚಾರ್ಯರು ಸೋಮೇಶ್ವರ ಲಿಂಗದಿಂದ ಜನಿಸಿದರು ಎಂದು ಹೇಳಲಾಗುತ್ತದೆ. ಭೂಲೋಕಗಳ ಸಂಕಷ್ಟಗಳ ನಿವಾರಣೆಗೆ ಇವರು ಉದ್ಭವಿಸಿದವರು. ಜಗತ್ತಿಗೆ ಲಿಂಗದ, ರುದ್ರಾಕ್ಷಿಯ ಮಹಿಮೆಯನ್ನು ಸಾರಿದ್ದಾರೆ. ವೀರಶೈವ ಧರ್ಮವೆಂದರೆ ವಿಕಲ್ಪರಹಿತ ಧರ್ಮ ವೆಂದು ರೇಣುಕಾಚಾರ್ಯರು ಸಾರಿದ್ದಾರೆ. ಮನುಷ್ಯನು ಧರ್ಮ



ರಹಿತನಾಗಬಾರದು. ಧರ್ಮದಿಂದಲೇ ಲೋಕಕ್ಕೆ ಶಾಂತಿ ಎಂದು ಧರ್ಮದ ಕುರುಹನ್ನು ತಿಳಿಸಿದವರಾಗಿದ್ದಾರೆ ಎಂದು ವಿವರಿಸಿದರು.

ಕಾರ್ಯಕ್ರಮದ ಸಾನ್ನಿಧ್ಯ ವಹಿಸಿದ್ದ ನೆಗಳೂರು ಸಂಸ್ಥಾನ ಹಿರೇಮಠದ ಶ್ರೀ ಗುರುಶಾಂತೇಶ್ವರ ಮಹಾಸ್ವಾಮಿಗಳು ಮಾತನಾಡಿ, ದೇಶಾದ್ಯಂತ ಜಗದ್ಗುರು ರೇಣುಕಾಚಾರ್ಯರ ಜಯಂತಿಯನ್ನು ಆಚರಿಸಲಾಗುತ್ತದೆ. ಸಮಾಜದಲ್ಲಿ ಅಸಮಾನತೆ, ಅಸ್ಪೃಶ್ಯತೆ ತಲೆದೋರಿದಾಗ ಅವುಗಳನ್ನು ಹೊಡೆದೋಡಿಸಲು ಆವಿರ್ಭವಿಸಿದ ಮಹಾನ್ ಗುರುಗಳು ರೇಣುಕಾಚಾರ್ಯರು. ಜಾತಿ-ಜಾತಿಗಳ ಕಂದಕಗಳನ್ನು ತೊಡೆದು ಭೂಮಿಗೆ ಶಿವಸಿದ್ಧಾಂತ ಬೋಧಿಸಿದವರು ರೇಣುಕಾಚಾರ್ಯ ಭಗವತ್ಪಾದರು. ಜಗದ್ಗುರು ರೇಣುಕಾಚಾರ್ಯರ ಕುರಿತು ಶ್ರದ್ಧೆಯಿಂದ ಅಧ್ಯಯನವಾಗಬೇಕು. ಇವರು ಧರ್ಮಕ್ಕೂ ಸಹ ಸಂವಿಧಾನ ಕೊಟ್ಟಿದ್ದಾರೆ. ರೇಣುಕಾಚಾರ್ಯರು ಪರಮಗುರುಗಳು, ಮಹಾನ್ ಸ್ವಾಮಿ, ಮಹಾನ್ ಗುರುಗಳಾಗಿದ್ದಾರೆ ಎಂದು ಹಾನಗಲ್ ಕುಮಾರಸ್ವಾಮಿಗಳು ತಿಳಿಸಿದ್ದಾರೆ. ರೇಣುಕಾಚಾರ್ಯರ ತತ್ವ ಸಂದೇಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಮತ್ತು ಮಕ್ಕಳಿಗೆ ಬೋಧನೆ ಮಾಡುವ ಸಂಕಲ್ಪ ಮಾಡಬೇಕೆಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ರೇಣುಕಾಚಾರ್ಯ ಮಠದ ಚಂದ್ರಶೇಖರ ದೇವರು, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷರಾದ ಬಿ.ಬಿ. ಅಸೂಟಿ, ತಾಲೂಕಾ ಗ್ಯಾರಂಟಿ ಯೋಜನಾ ಸಮಿತಿ ಅಧ್ಯಕ್ಷರಾದ ಅಶೋಕ ಮಂದಾಲಿ, ಗಣ್ಯರಾದ ಡಿ.ಆರ್. ಪಾಟೀಲ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ವಿವಿಧ ಇಲಾಖೆಯ ಅಧಿಕಾರಿಗಳು, ಸಮುದಾಯದ ಗಣ್ಯರು, ಹಿರಿಯರು ಹಾಜರಿದ್ದರು.

ಅಕ್ಷತಾ ಹಿರೇಮಠ ಮತ್ತು ತಂಡದವರಿಂದ ಸುಗಮ ಸಂಗೀತ ಕಾರ್ಯಕ್ರಮ ಜರುಗಿತು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ ಸ್ವಾಗತಿಸಿದರು. ಆರ್.ಬಿ. ಚಿನಿವಾಲರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

> ಹಲವಾರು ಮಹಾನ್ ವ್ಯಕ್ತಿಗಳ, ಯೋಗಿಗಳ ಜಯಂತಿಯನ್ನು ಆಚರಿಸುವ ಮೂಲ ಉದ್ದೇಶವೆಂದರೆ ಅವರ ಸಂದೇಶಗಳನ್ನು ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳುವುದಾಗಿದೆ. ಜಗದ್ಗುರು ರೇಣುಕಾಚಾರ್ಯರನ್ನು ರೇವಣಾರಾಧ್ಯ ಅಥವಾ ರೇವಣಸಿದ್ಧ ಎಂದು ಕರೆಯುತ್ತಾರೆ. ಜಗದ್ಗುರು ರೇಣುಕಾಚಾರ್ಯರು ಧರ್ಮದಿಂದಲೇ ವಿಶ್ವಕ್ಕೆ ಶಾಂತಿ, ಮಾನವ ಧರ್ಮಕ್ಕೆ ಜಯವಾಗಲಿ ಎಂದು ಸಾರಿದ್ದಾರೆ. ಸಮಾಜದಲ್ಲಿ ಅಸ್ಪೃಶ್ಯತೆ, ಮೂಢನಂಬಿಕೆಗಳನ್ನು ಹೋಗಲಾಡಿಸಿ ಸಾಮರಸ್ಯ, ಸಹಬಾಳ್ವೆ, ಸೌಹಾರ್ದತೆ ಬದುಕನ್ನು ಬೋಧಿಸಿ ಲೋಕಕಲ್ಯಾಣಕ್ಕಾಗಿ ಶ್ರಮಿಸಿದ್ದಾರೆ.
>
> - ಎಚ್.ಕೆ. ಪಾಟೀಲ
> ಜಿಲ್ಲಾ ಉಸ್ತುವಾರಿ ಸಚಿವರು.

### ಎಸ್‌ಎಸ್‌ಎಲ್‌ಸಿ ಪರೀಕ್ಷೆ ಕುರಿತ ಪೂರ್ವಭಾವಿ ಸಭೆಯಲ್ಲಿ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್

# ಪರೀಕ್ಷೆಗಳು ಪಾರದರ್ಶಕವಾಗಿ ಜರುಗಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯಲ್ಲಿ ಮಾರ್ಚ್ 21ರಿಂದ ಏಪ್ರಿಲ್ 4ರವರೆಗೆ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳು ಜರುಗಲಿದ್ದು, ಪರೀಕ್ಷೆಗಳು ಶಾಂತಿಯುತವಾಗಿ, ಪಾರದರ್ಶಕವಾಗಿ ನಡೆಯುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ 61 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಲಿದ್ದು, ಪರೀಕ್ಷಾ ಕೇಂದ್ರಗಳಲ್ಲಿ ಗೋಡೆಗಡಿಯಾರಗಳು ಇರುವಂತೆ ನೋಡಿಕೊಳ್ಳಬೇಕು. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲು ಅಗತ್ಯವಿರುವ ಗಾಳಿ, ಬೆಳಕು, ನೀರಿನ ವ್ಯವಸ್ಥೆ ಕಲ್ಪಿಸಬೇಕು. ಪರೀಕ್ಷಾರ್ಥಿಗಳಿಗೆ ಪರೀಕ್ಷೆ ಬರೆಯಲು ಸೂಕ್ತ ಆಸನದ ಸೌಲಭ್ಯ ಕಲ್ಪಿಸಬೇಕು. ಪರೀಕ್ಷಾ ಸಮಯದಲ್ಲಿ ಯಾವುದೇ ಅಕ್ರಮ, ಲೋಪ-ದೋಷಗಳಾಗದಂತೆ ಎಚ್ಚರಿಕೆ ವಹಿಸಬೇಕು. ಪರೀಕ್ಷೆಗಳನ್ನು ಸುಗಮವಾಗಿ ನಡೆಸಲು ಸಂಬಂಧಿತ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಬೇಕೆಂದರು.

ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ



ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ.

ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ. ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷಾ ಕೇಂದ್ರದ ಮುಖ್ಯ ಅಧೀಕ್ಷಕರು ಕ್ಯಾಮರಾ ಹೊಂದಿರದ ಸಾಮಾನ್ಯ ಮೊಬೈಲ್ ಇರಿಸಿಕೊಳ್ಳಲು ಅವಕಾಶವಿದ್ದು, ಉಳಿದ ಎಲ್ಲ ಪರೀಕ್ಷಾ ಸಿಬ್ಬಂದಿ/ ವಿದ್ಯಾರ್ಥಿಗಳು ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು/ ಉಪಯೋಗಿಸುವುದನ್ನು ನಿಷೇಧಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

> ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರುಡಿ ಮಾತನಾಡಿ, ಮಾರ್ಚ್ 21ರಿಂದ ಏಪ್ರಿಲ್ 4ರವರೆಗೆ ಎಸ್‌ಎಸ್‌ಎಲ್‌ಸಿ ವಾರ್ಷಿಕ ಪರೀಕ್ಷೆಗಳು ಜಿಲ್ಲೆಯ 61 ಪರೀಕ್ಷಾ ಕೇಂದ್ರಗಳಲ್ಲಿ ಜರುಗಲಿವೆ. ಜಿಲ್ಲೆಯಲ್ಲಿ ಒಟ್ಟು 16458 ವಿದ್ಯಾರ್ಥಿಗಳು ಪರೀಕ್ಷೆ ಬರೆಯಲಿದ್ದಾರೆ. ಪರೀಕ್ಷೆಗಳು ಶಾಂತಿಯುತವಾಗಿ ಹಾಗೂ ಸುಗಮವಾಗಿ ಜರುಗಲು ಕ್ರಮ ವಹಿಸಲಾಗಿದೆ ಎಂದರು.

ಜಿ.ಪಂ ಮುಖ್ಯಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ಪಾರದರ್ಶಕವಾಗಿ ಹಾಗೂ ವ್ಯವಸ್ಥಿತವಾಗಿ ಜರುಗುವಂತೆ ಅಧಿಕಾರಿಗಳು ಕ್ರಮ ವಹಿಸಬೇಕೆಂದು ಸೂಚಿಸಿದರು.

ಸಭೆಯಲ್ಲಿ ಪರೀಕ್ಷಾ ಕೇಂದ್ರಗಳಿಗೆ ಆಗಮಿಸಲು ವಿದ್ಯಾರ್ಥಿಗಳಿಗೆ ಸಮಯಕ್ಕೆ ಸರಿಯಾಗಿ ಬಸ್ ಸೌಲಭ್ಯ ಕಲ್ಪಿಸುವುದು, ಪರೀಕ್ಷಾ ಕೇಂದ್ರಗಳ ಸ್ವಚ್ಛತೆ, ಸೂಕ್ತ ಬಂದೋಬಸ್ತ್, ಸಿ.ಸಿ ಟಿವಿ ಅಳವಡಿಕೆ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಡಯಟ್ ಉಪನಿರ್ದೇಶಕ ಜಿ.ಎಲ್. ಬಾರಾಟಕ್ಕೆ ಸೇರಿದಂತೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಲೋಕ ಅದಾಲತ್‌ನಲ್ಲಿ ಒಂದಾದ ದಂಪತಿಗಳು



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಿರಿಯ ದಿವಾಣಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮತ್ತು ಸೆಷನ್ಸ್ ನ್ಯಾಯಾಲಯದಲ್ಲಿ ಮಂಗಳವಾರ ನಡೆದ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ 30 ಸಿವಿಲ್ ಪ್ರಕರಣ, 320 ಕ್ರಿಮಿನಲ್ ಪ್ರಕರಣ ಹಾಗೂ ವ್ಯಾಜ್ಯಪೂರ್ವ ಪ್ರಕರಣಗಳೆಂದು ಪರಿಗಣಿಸಿದ ಬ್ಯಾಂಕ್‌ನಿಂದ ಸಲ್ಲಿಕೆಯಾದ 50ಕ್ಕೂ ಹೆಚ್ಚಿನ ಪ್ರಕರಣಗಳನ್ನು ರಾಜೀ ಸಂಧಾನದ ಮೂಲಕ ಬಗೆಹರಿಸಲಾಯಿತು.

ವಿವಾಹ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದ ಎರಡು ಜೋಡಿಯನ್ನು ನ್ಯಾಯಾಧೀಶರಾದ ಭರತ್ ಯೋಗೀಶ್ ಕರಗುದರಿ, ಸಂಧಾನಕಾರರಾದ ಮಹೇಶ್ ಡಿ.ಆರ್. ಹಾಗೂ ವಿವಾಹ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದವರ ಪರ ವಕೀಲರಾಗಿದ್ದ ಬಿ.ಎಸ್. ಪಾಟೀಲ, ಆರ್.ಎಂ. ಕುರಿ ಅವರಿಗೆ ತಿಳಿ ಹೇಳಿ ಅವರ ವಿವಾಹ ಜೀವನವನ್ನು ಸರಿಪಡಿಸಿ ಮತ್ತೆ ಜೀವನ ನಡೆಸುವಂತೆ ಸಲಹೆ ನೀಡಲಾಯಿತು. ಒಂದಾದ ದಂಪತಿಗಳು ಪರಸ್ಪರ ಹಾರ ಬದಲಾಯಿಸಿಕೊಂಡು ಪುನಃ ಒಂದಾದರು.

ಸಹಾಯಕ ಅಭಿಯೋಜಕ ಹೀನಾಕೌಸರ ಗಂಜಿಹಾಳ, ಬಿ.ಎಸ್. ಬಾಳೇಶ್ವರಮಠ, ಬಿ.ಎಸ್. ಪಾಟೀಲ, ಎಸ್.ಸಿ. ನರಸಮ್ಮನವರ, ಎನ್.ಐ. ಬೆಲ್ಲದ, ಎ.ಟಿ. ಕಟ್ಟಿಮನಿ, ವಿ.ಕೆ. ನಾಯಕ, ನೀಲಪ್ಪ ಕೋರಣ್ಣವರ, ಮೃತ್ಯುಂಜಯ ಯಲವಗಿ ಇದ್ದರು.

### ಮಾ.15ರಂದು ಆರತಿ ಫೈನಾನ್ಸ್ ಎದುರು ಪ್ರತಿಭಟನೆಗೆ ತೀರ್ಮಾನ: ಅಂಬಿಕಾ ಕಬಾಡಿ

# ನ್ಯಾಯ ಸಿಗದಿದ್ದರೆ ಆತ್ಮಹತ್ಯೆ

■ ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್ 15ರಂದು ಬೆಟಗೇರಿಯಲ್ಲಿರುವ ಯಲ್ಲಪ್ಪ ಮಿಸ್ಕಿನ್ ಒಡೆತನದ ಆರತಿ ಫೈನಾನ್ಸ್ ಎದುರು ಪ್ರತಿಭಟನೆ ನಡೆಸಲು ತಿರ್ಮಾನಿಸಲಾಗಿದೆ. ಈ ಹಿಂದೆ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಕೂಡ ಯಾವುದೇ ರೀತಿಯ ಕ್ರಮ ಕೈಗೊಂಡಿಲ್ಲ. ಹಾಗಾಗಿ ಈ ನಿರ್ಧಾರಕ್ಕೆ ಬರಲಾಗಿದೆ. ಸಂಬಂಧಪಟ್ಟ ಅಧಿಕಾರಿಗಳು ಕ್ರಮ ವಹಿಸದಿದ್ದರೆ ಆರತಿ ಫೈನಾನ್ಸ್ ಎದುರು ಆತ್ಮಹತ್ಯೆಗೆ ಶರಣಾಗುವುದಾಗಿ ಅಂಬಿಕಾ ಕಬಾಡಿ ಹೇಳಿದರು.

ಪತ್ರಿಕಾ ಭವನದಲ್ಲಿ ಬುಧವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಬಡ್ಡಿ ದಂಧೆಕೋರರ ಹಾವಳಿಯಿಂದಾಗಿ ಗದಗ-




ಬೆಟಗೇರಿ ಅವಳಿ ನಗರದ ಸಾರ್ವಜನಿಕರು ತತ್ತರಿಸಿ ಹೋಗಿದ್ದಾರೆ. ಇವರಿಗೆ ಯಾರ ಭಯವೂ ಇಲ್ಲದಂತಾಗಿದ್ದು, ಅಮಾಯಕರ ಜೀವ ಹಿಂಡುತ್ತಿದ್ದಾರೆ. ಬಡ್ಡಿಗೆ ಮೀಟರ್ ಬಡ್ಡಿ, ಚಕ್ರಬಡ್ಡಿ ಸೇರಿಸಿ ವಸೂಲಿ ಮಾಡುವುದರ ಜೊತೆಗೆ ಹಲವರ ಆಸ್ತಿಯನ್ನು ಕಬಳಿಸಿದ್ದಾರೆ. ಇಂಥವರ ವಿರುದ್ಧ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳಬೇಕು ಎಂದು ಅಂಬಿಕಾ ಕಬಾಡಿ ಒತ್ತಾಯಿಸಿದರು.

ಗದಗ-ಬೆಟಗೇರಿ ಅವಳಿ ನಗರದಲ್ಲಿ ಸಾಕಷ್ಟು ಅನೈತಿಕ, ಅವ್ಯವಹಾರಗಳು ಹಾಗೂ ನಿರಂತರವಾಗಿ ಬಡ್ಡಿ ಫೈನಾನ್ಸ್ ದಂಧೆಕೋರರು ಅಮಾಯಕರ ಸುಲಿಗೆ ಮಾಡುತ್ತಾ ಬಂದಿದ್ದು, ಅವರ ವಿರುದ್ಧ ಅನೇಕ ಬಾರಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಲು ಪ್ರಯತ್ನಿಸಿದರೂ ಯಾವುದೇ ಪ್ರಯೋಜನವಾಗಿಲ್ಲ. ಆದ್ದರಿಂದ ಮಾರ್ಚ್ 15ರಂದು ಪ್ರತಿಭಟನೆ ನಡೆಸಲಿದ್ದು, ನ್ಯಾಯ ಸಿಗದಿದ್ದಲ್ಲಿ ಆತ್ಮಹತ್ಯೆಗೆ ಶರಣಾಗುವುದಾಗಿ ಹೇಳಿದರು.

ಬಡ್ಡಿ ದಂದೆಕೋರ ಯಲ್ಲಪ್ಪ ಮಿಸ್ಕಿನ್ ಅವರನ್ನು ಕೂಡಲೇ ಗಡಿಪಾರು ಮಾಡಬೇಕು. ಜೊತೆಗೆ, ಇವರ ಆಸ್ತಿಯನ್ನು ಮುಟ್ಟುಗೋಲು ಹಾಕಬೇಕು. ಅಮಾಯಕರಿಂದ ಪಡೆದ ಚೆಕ್, ಬಾಂಡ್ ಸೇರಿದಂತೆ ಇತರೆ ದಾಖಲೆಗಳನ್ನ ಮೂಲ ಮಾಲೀಕರಿಗೆ ತಲುಪಿಸಬೇಕು. ಅನಧಿಕೃತ ಫೈನಾನ್ಸ್‌ಗಳಿಗೆ ಕಡಿವಾಣ ಹಾಕಬೇಕೆಂದು ಅಂಬಿಕಾ ಕಬಾಡಿ ಆಗ್ರಹಿಸಿದರು.

ಈ ವೇಳೆ ದಾವಲ್ ಮುಳಗುಂದ, ಗಣಪತಿ ಹಬೀಬ, ಸಮೀರ್ ಉಕ್ಕಲಿ ಉಪಸ್ಥಿತರಿದ್ದರು.

## ಸಂಪಾದಕೀಯ

# ಹೆತ್ತವರ ನೋಡಿಕೊಳ್ಳದ ಮಕ್ಕಳಿಗೆ ಸರಕಾರಿ ಸೌಲಭ್ಯವೂ ಕಡಿತವಾಗಲಿ

ಹೆತ್ತವರನ್ನು ಆರೈಕೆ ಮಾಡದ ಮಕ್ಕಳಿಗೆ ಆಸ್ತಿಯಲ್ಲಿ ಯಾವುದೇ ಹಕ್ಕು ಇಲ್ಲ ಎಂದು ಕಂದಾಯ ಸಚಿವ ಕೃಷ್ಣಭೈರೇಗೌಡ ಸ್ಪಷ್ಟಪಡಿಸಿರುವುದು, ಭಾರಿ ಚರ್ಚೆಗೆ ಮಾತ್ರವಲ್ಲದೆ ಮೆಚ್ಚುಗೆಗೂ ಪಾತ್ರವಾಗಿದೆ.

ವಿಧಾನ ಪರಿಷತ್‌ನ ಕಲಾಪದಲ್ಲಿ ಸದಸ್ಯೆ ಬಲ್ಕೀಸ್ ಬಾನು ಅವರ ಪ್ರಶ್ನೆಗೆ ಉತ್ತರಿಸಿದ ಭೈರೇಗೌಡ, ಪೋಷಕರು ಮತ್ತು ಹಿರಿಯ ನಾಗರಿಕರ ನಿರ್ವಹಣೆ ಮತ್ತು ಕಲ್ಯಾಣ ಕಾಯ್ದೆ 2007 ಅಡಿ ತಂದೆ-ತಾಯಿ ಹಾಗೂ ಹಿರಿಯರ ಆರೈಕೆ ಮಾಡದಿದ್ದಲ್ಲಿ ಅವರ ಮಕ್ಕಳು ಅಥವಾ ಸಂಬಂಧಿಕರಿಗೆ ನೀಡಿದ್ದ ವಿಲ್-ದಾನಪತ್ರವನ್ನು ರದ್ದುಗೊಳಿಸಲು ಕಾನೂನಿನಲ್ಲಿ ಅವಕಾಶವಿದೆ. ಅದನ್ನ ಪರಿಣಾಮಕಾರಿಯಾಗಿ ಜಾರಿಗೊಳಿಸುವುದಾಗಿ ಭರವಸೆ ನೀಡಿರುವುದು, ಯುವ ಸಮುದಾಯಕ್ಕೆ ಬಿಸಿ ಮುಟ್ಟಿಸಿದೆ.

ಆದರೆ ವಾಸ್ತವದಲ್ಲಿ ಹೆತ್ತ ತಂದೆ ತಾಯಿಗಳು, ಮಕ್ಕಳು ಎಷ್ಟೆ ಕಷ್ಟ ಕೊಟ್ಟರೂ, ಆರೈಕೆ ಮಾಡದಿದ್ದರೂ ಆಸ್ತಿಯನ್ನು ಮಾತ್ರ ಮಕ್ಕಳಿಗೂ ಮಾಡುತ್ತಾರೆ. ಎಲ್ಲೊ ಒಂದೆರಡು ಪ್ರಕರಣದಲ್ಲಿ ಕೆಲ ಪೋಷಕರು ತಮ್ಮ ಆಸ್ತಿಯನ್ನು ಯಾವುದೇ ಟ್ರಸ್ಟಿಗೊ, ದೇವಸ್ಥಾನಕ್ಕೊ ದಾನ ಮಾಡುತ್ತಾರೆ. ಆದರೆ ಭಾಗಶಃ ತಮ್ಮ ಮಕ್ಕಳಿಗೆ ಆಸ್ತಿ ಬಿಟ್ಟು ಹೋಗುತ್ತಾರೆ.

ಇನ್ನು ವಿಲ್ ಮಾಡುವ ವಿಷಯಕ್ಕೆ ಬರುವುದಾದರೆ ಈಗಲೂ ಗ್ರಾಮೀಣ ಭಾಗದಲ್ಲಿ ವಿಲ್ ಬರೆಸುವ, ಬರೆಯುವ ಕಾನೂನು ಸಾಕ್ಷರತೆ ಮೂಡಿಲ್ಲ. ಹೀಗಾಗಿ ಮಕ್ಕಳ ಬಗ್ಗೆ ಎಷ್ಟೇ ಆರೋಪ ಇದ್ದರೂ ಅವರ ಕಾಲಾನಂತರ ಆ ಆಸ್ತಿಯಲ್ಲಾ ಮಕ್ಕಳಿಗೆ ಸೇರುತ್ತದೆ.

ಅದೇನೇ ಇರಲಿ, ಈ ಕಾನೂನನ್ನು ಕೆಲವು ಹಿರಿಯ ನಾಗರಿಕರಾದರೂ ಸದ್ಬಳಕೆ ಮಾಡಿಕೊಂಡರೆ ಭವಿಷ್ಯದಲ್ಲಿ ಮಕ್ಕಳಿಗೆ ಒಂದು ಪಾಠವಾಗಲಿದೆ. ಜೊತೆಗೆ ಸರಕಾರವೂ ಪಾಲಕರನ್ನು ಆರೈಕೆ ಮಾಡದ ಮಕ್ಕಳಿಗೆ ಸರಕಾರಿ ಸೌಲಭ್ಯವೂ ಕಡಿತವಾಗುವ ನಿರ್ಧಾರ ಕೈಗೊಂಡರೆ ಹಿರಿಯರ ಜೀವಕ್ಕೆ ನೆಮ್ಮದಿ ಸಿಗಲಿದೆ.

---

**ಶಿವಾದ್ವೈತ ಸಮಾವೇಶ, ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳು**

# ನೆಮ್ಮದಿಯ ಬದುಕಿಗೆ ರೇಣುಕಾಚಾರ್ಯರ ಕೊಡುಗೆ ಅಪಾರ

**■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು**

ಭಾವೈಕ್ಯತೆ ಮತ್ತು ಆಧ್ಯಾತ್ಮ ಭಾರತದ ಉಸಿರು. ಸಾತ್ವಿಕ-ತಾತ್ವಿಕ ಹಿತ ಚಿಂತನಗಳನ್ನು ಬೆಳೆಸುವುದರ ಮೂಲಕ ಭಾವೈಕ್ಯತೆಯ ಸೇತುವೆಯನ್ನು ಕಟ್ಟಿದ ಕೀರ್ತಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ ಸಲ್ಲುತ್ತದೆ. ಶಾಂತಿ-ನೆಮ್ಮದಿಯ ಬದು-ಕಿಗೆ ರೇಣುಕಾಚಾರ್ಯರು ಕೊಟ್ಟ ಕೊಡುಗೆ ಅಪಾರವಾದುದೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಬುಧವಾರ ಬೆಳಿಗ್ಗೆ ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಹಾಗೂ ಕ್ಷೇತ್ರನಾಥ ಶ್ರೀ ವೀರಭದ್ರಸ್ವಾಮಿ ಮಹಾರಥೋತ್ಸವ ಸಂದರ್ಭದಲ್ಲಿ ಜರುಗಿದ ಶಿವಾದ್ವೈತ ಸಮಾವೇಶ ಮತ್ತು ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿ ಪ್ರದಾನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಸಾಹಿತ್ಯ-ಸಂಸ್ಕೃತಿ ಈ ನಾಡಿನ ಅಮೂಲ್ಯ ಸಂಪತ್ತು. ಸಂಪತ್ತು ಬೆಳೆದಂತೆ ಸಂಸ್ಕೃತಿ ಸಭ್ಯತೆ ಬೆಳೆದುಕೊಂಡು ಬರಬೇಕು. ಸಮಾಜದ ಓರೆ-ಕೋರೆಗಳನ್ನು ತಿದ್ದಿ ತೀಡುವುದೇ ಮಹಾತ್ಮರ ಜೀವನದ ಗುರಿಯಾಗಿದೆ. ಮೌಲ್ಯಾಧಾರಿತ ಬದುಕಿಗೆ ಶ್ರೀ ರೇಣುಕಾಚಾರ್ಯರು ಕೊಟ್ಟ ದಶ ಧರ್ಮ ಸೂತ್ರಗಳು ಆಶಾಕಿರಣವಾಗಿವೆ. ಮಾನವೀಯ ಮೌಲ್ಯಗಳ ಸಂವರ್ಧನೆ ಮತ್ತು ಸಾಮಾಜಿಕ ಸತ್ಕ್ರಾಂತಿಯ ಆದರ್ಶಗಳನ್ನು ಎತ್ತಿ ಹಿಡಿದ ಶ್ರೇಯಸ್ಸು ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ



ಸಲ್ಲುತ್ತದೆ. ಮಹಾಮುನಿ ಅಗಸ್ತ್ಯರಿಗೆ ಬೋಧಿಸಿದ ಸಿದ್ಧಾಂತ ಶಿಖಾಮಣಿಯ ತತ್ವ ಸಿದ್ಧಾಂತಗಳು ಮನದ ನೆಮ್ಮದಿಗೆ ಮತ್ತು ಉನ್ನತಿಗೆ ಮೂಲ ಸೆಲೆಯಾಗಿವೆ ಎಂದರು.

ಪ್ರಶಸ್ತಿ ಸ್ವೀಕರಿಸಿದ ಡಾ. ಕವಿತಾ ಮಿಶ್ರಾ ಮಾತನಾಡಿ, ಕ್ರಿಯಾಶೀಲ ಬದುಕು ಜೀವನದ ಶ್ರೇಯಸ್ಸಿಗೆ ಮೂಲ. ಜೀವನ ಮೌಲ್ಯಗಳನ್ನು ಸಂಪಾದಿಸಿಕೊಂಡು ಸನ್ಮಾರ್ಗದಲ್ಲಿ ನಡೆಯುವುದೇ ನಮ್ಮೆಲ್ಲರ ಗುರಿಯಾಗಬೇಕು. ಭೂ ತಾಯಿ ಮಡಿಲಲ್ಲಿ ಬೆವರು ಸುರಿಸಿದ ವ್ಯಕ್ತಿಯ ಬಾಳು ವಿಕಾಸಗೊಳ್ಳುವುದರಲ್ಲಿ ಯಾವುದೇ ಸಂದೇಹವಿಲ್ಲ. ಕಾಯಕ ಜೀವನ ಜೀವನಕ್ಕೆ ಚೈತನ್ಯ ಶಕ್ತಿಯನ್ನು ಕೊಡುವುದೆಂಬ ಶ್ರೀ ಜಗದ್ಗುರು ರೇಣುಕಾಚಾರ್ಯರ ಸಿರಿವಾಣಿ ನನ್ನ ಬದುಕಿನಲ್ಲಿ ಕಂಡುಕೊಂಡಿದ್ದೇನೆ. ಕೃಷಿ ಪ್ರಾರಂಭದಲ್ಲಿ ಕಷ್ಟ ಎನಿಸಿದರೂ ನಿರಂತರ ಶ್ರಮ ಸಾಧನೆಯಿಂದ ಉಜ್ವಲ ಭವಿಷ್ಯ ರೂಪಿತಗೊಳ್ಳುತ್ತದೆ ಎಂಬುದಕ್ಕೆ ನಾನೇ ಸಾಕ್ಷಿಯಾಗಿದ್ದೇನೆ ಎಂದರು.

ವೀರಶೈವ ರೇಣುಕ ರೇವಣಸಿದ್ಧ ಸತ್ಯ ದರ್ಶನ ಕೃತಿ ಬಿಡುಗಡೆ ಮಾಡಿದ ಆಧ್ಯಾತ್ಮ ತತ್ವ ಚಿಂತಕ, ಸಂಶೋಧಕ ಡಾ. ಎ.ಸಿ. ವಾಲಿ ಮಾತನಾಡಿ, ಶ್ರೀ ಜಗದ್ಗುರು ರೇಣುಕಾಚಾರ್ಯರು ಶತಮಾನ ಪುರುಷರಲ್ಲ. ಯುಗಪುರುಷರು. ಜಾತಿ-ಜನಾಂಗಗಳ ಗಡಿ ಮೀರಿ ಮಾನವೀಯ ಉದಾತ್ತ ಮೌಲ್ಯಗಳನ್ನು ಪ್ರತಿಪಾದಿಸಿದ ಪರಮಾಚಾರ್ಯರು. ಅಂಗ ಅವಗುಣಗಳನ್ನು ಸಂಸ್ಕಾರದ ಮೂಲಕ ದೂರ ಮಾಡಿ ಸಮೃದ್ಧ ಬದುಕಿಗೆ ಶ್ರೀಕಾರ ಹಾಕಿದ ಇತಿಹಾಸ ಪುರುಷರಾಗಿದ್ದಾರೆ ಎಂದರು.

ಮುಕ್ತಿಮಂದಿರದ ವಿಮಲ ರೇಣುಕ ಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿದ್ದರು. ಪ್ರತಿಷ್ಠಿತ ಶ್ರೀ ಜಗದ್ಗುರು ರೇಣುಕಾಚಾರ್ಯ ಪ್ರಶಸ್ತಿಯನ್ನು ರಾಯಚೂರು ಜಿಲ್ಲೆ ಕವಿತಾಳ ಗ್ರಾಮದ ಸಾವಯವ ಕೃಷಿ ತಜ್ಞೆ ಡಾ. ಕವಿತಾ ಮಿಶ್ರಾ ಇವರಿಗೆ ಪ್ರದಾನ ಮಾಡಲಾಯಿತು. ಸಿದ್ಧರಬೆಟ್ಟದ ವೀರಭದ್ರ ಶಿವಾಚಾರ್ಯರು ಪ್ರಶಸ್ತಿ ವಾಚನ ಮಾಡಿದರು.

ಸಮಾರಂಭವನ್ನು ಉದ್ಘಾಟಿಸಿದ ವಿ.ಆರ್.ಎಲ್ ಸಮೂಹ ಸಂಸ್ಥೆ ಚೇರಮನ್ ಡಾ.ವಿಜಯ ಸಂಕೇಶ್ವರ ಮಾತನಾಡಿ, ದೇಶ ಮತ್ತು ಧರ್ಮ ಮನುಷ್ಯನ ಎರಡು ಕಣ್ಣು. ಮನುಷ್ಯರಲ್ಲಿ ವೈಚಾರಿಕ ಮನೋಭಾವನೆಗಳು ಬೆಳೆದು ಬರಲಿ. ಆದರೆ ನಾಸ್ತಿಕ ಮನೋಭಾವ ಬೆಳೆಯಬಾರದು. ಹುಟ್ಟು-ಸಾವು ಯಾರನ್ನೂ ಬಿಟ್ಟಿಲ್ಲ. ಇವುಗಳ ಮಧ್ಯದ ಬದುಕು ಸಮೃದ್ಧಗೊಳ್ಳಲು ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ವಿಚಾರಧಾರೆಗಳು ಸರ್ವ ಕಾಲಕ್ಕೂ ಸರ್ವರಿಗೂ ಅನ್ವಯಿಸುತ್ತವೆ ಎಂದರು.

ಮುಖ್ಯ ಅತಿಥಿಗಳಾಗಿ ಸಚಿವ ಡಾ. ಎಂ.ಬಿ. ಪಾಟೀಲರ ಪುತ್ರ ಬಸನಗೌಡ ಪಾಟೀಲ,

ರೋಣ ಶಾಸಕ ಜಿ.ಎಸ್. ಪಾಟೀಲ, ಶೃಂಗೇರಿ ಶಾಸಕ ಟಿ.ಡಿ. ರಾಜೇಗೌಡರು, ಕೊಡ್ಲಿಪೇಟೆ ರಾಜೇಶ್ವರಿ ನಾಗರಾಜ್, ಶಿವಮೊಗ್ಗದ ಎಸ್.ಎಸ್. ಜ್ಯೋತಿಪ್ರಕಾಶ್ ಭಾಗವಹಿಸಿದ್ದರು. ಪಡಸಾವಳಿ-ಉದ್ಗಿರಿ ಕ್ಷೇತ್ರದ ಶಂಭುಲಿಂಗ ಶಿವಾಚಾರ್ಯ ಸ್ವಾಮಿಗಳು ಹಾಗೂ ಸ್ಟೇಷನ್ ಬಬಲಾದ ಶಿವಮೂರ್ತಿ ಶಿವಾಚಾರ್ಯ ಸ್ವಾಮಿಗಳಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು.

ಶ್ರೀ ಜಗದ್ಗುರು ರೇಣುಕಾಚಾರ್ಯ ಗುರುಕುಲದ ಸಾಧಕರಿಂದ ವೇದಘೋಷ ಜರುಗಿತು. ಜಿ.ಜಿ. ರಕ್ಷಿತಾ ಇವರು ಭರತನಾಟ್ಯ ಪ್ರದರ್ಶಿಸಿದರು. ಪತ್ರಕರ್ತ ಪ್ರಶಾಂತ ರಿಪ್ಪನ್‌ಪೇಟೆ ಸ್ವಾಗತಿಸಿದರು. ಎಂ.ಸಂಗಮೇಶ ಉತ್ತಂಗಿ ಪ್ರಾರ್ಥಿಸಿದರೆ, ಶಾಂತಾ ಆನಂದ ನಿರೂಪಿಸಿದರು.

---

# ನಮ್ಮ ದೇಹ ಮತ್ತೊಬ್ಬರ ಬದುಕಿಗೆ ಆಸರೆಯಾಗಲಿ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮರಣ ಹೊಂದಿದ ಮೇಲೆ ಸುಟ್ಟರೆ ಬೂದಿಯಾಗಿ, ಹೂತರೆ ಮಣ್ಣಲ್ಲಿ ಮಣ್ಣಾಗುವ ದೇಹ ಮತ್ತೊಬ್ಬರ ಬದುಕಿಗೆ ಆಸರೆಯಾಗಲಿ ಮತ್ತು ವೈದ್ಯಕೀಯ ವಿದ್ಯಾರ್ಥಿಗಳ ಸಂಶೋಧನೆಗೆ ಅನಕೂಲವಾಗಲಿ ಎಂಬ ಸದುದ್ದೇಶದಿಂದ ಮರಣಾನಂತರ ಸ್ವಯಂಪ್ರೇರಿತವಾಗಿ ದೇಹದಾನ ಮಾಡಲು ಒಪ್ಪಿಕೊಂಡಿದ್ದೇವೆ ಎಂದು ನಿವೃತ್ತ ಶಿಕ್ಷಕ ಪೂರ್ಣಾಜಿ ಖರಾಟೆ ಮತ್ತು ಸಹಚರರು ಹೇಳಿದರು.

ಅವರು ಪಟ್ಟಣದಲ್ಲಿ ಮಂಗಳವಾರ ಗದಗ ವೈದ್ಯಕೀಯ ವಿಜ್ಞಾನ ಸಂಸ್ಥೆಯ ದೇಹದಾನ ಸಂಘ-ಅಂಗರಚನಾ ಶಾಸ್ತ್ರ ವಿಭಾಗಕ್ಕೆ ಸ್ವಯಂಪ್ರೇರಿತವಾಗಿ




ದೇಹದಾನದ ಪ್ರತಿಜ್ಞೆ ಮಾಡಿರುವ ಪ್ರಮಾಣಪತ್ರವನ್ನು ಪ್ರದರ್ಶಿಸಿ ಮಾಹಿತಿ ನೀಡಿದರು.

ಇತ್ತೀಚಿನ ದಿನಗಳಲ್ಲಿ ವೈದ್ಯಕೀಯ ವಿದ್ಯಾರ್ಥಿಗಳ ಸಂಶೋಧನೆಗೆ ಮನುಷ್ಯನ ದೇಹಗಳ ಅವಶ್ಯಕತೆ ಹೆಚ್ಚಾಗಿ ಕಂಡುಬರುತ್ತಿದೆ. ದೇಹವನ್ನು ವೈದ್ಯಕೀಯ ಜ್ಞಾನಾರ್ಜನೆ ಮತ್ತು ಸಂಶೋಧನೆಗಾಗಿ ಕೊಡಲು ಪ್ರಮಾಣೀಕರಿಸಿದ್ದೇವೆ. ಮರಣಾನಂತರ ಕಿಡ್ನಿ, ಕಣ್ಣು, ಹೃದಯ ಸೇರಿ ಮನುಷ್ಯನ ಕೆಲ ಅಂಗಾಗಳನ್ನು ಅಪಘಾತಕ್ಕೀಡಾದವರು ಮತ್ತು ರೋಗಿಗಳಿಗೆ ಜೋಡಿಸುವುದರಿಂದ ಅಂಥವರ ಬಾಳಿಗೆ ಬೆಳಕಾಗುತ್ತದೆ.

ದೇಹದಾನ ಮಾಡಿ ಪ್ರಚಾರ ಗಿಟ್ಟಿಸಿಕೊಳ್ಳುವುದು ಉದ್ದೇಶವಲ್ಲ. ಬದಲಾಗಿ, ಈ ಬಗ್ಗೆ ಜಾಗೃತಿ ಮತ್ತು ಪ್ರೇರಣೆಯಾಗಬೇಕೆಂಬ ಸದುದ್ದೇಶವಷ್ಟೇ. ನನ್ನ ಜತೆಗೆ ಆತ್ಮೀಯರು, ನಿವೃತ್ತ ಶಿಕ್ಷಕರಾದ ಎನ್.ಆರ್. ಸಾತಪುತೆ ಹಾಗೂ ಬಿ.ಎಸ್. ಈಳಿಗೇರ ಅವರು ಸಹ ಗದಗ ಜಿಮ್ಸ್ ನಿರ್ದೇಶಕ ಡಾ.ಬಸವರಾಜ ಬೊಮ್ಮನಹಳ್ಳಿ ಹಾಗೂ ಡಾ.ವಿರೇಶ ಕರಬಸಪ್ಪ ಹಂಚಿನಾಳ ಅವರ ಸಮ್ಮುಖದಲ್ಲಿ ಸ್ವಯಂ ಪ್ರೇರಿತವಾಗಿ ದೇಹದಾನ ಮಾಡಲು ನಿರ್ಧಾರಿಸಿದ್ದಾರೆ ಎಂದರು.

ಈ ವೇಳೆ ವಿಶ್ವನಾಥ ಖರಾಟೆ ಸೇರಿದಂತೆ ಅನೇಕರು ಇದ್ದರು. ನಿವೃತ್ತ ಶಿಕ್ಷಕತ್ರಯರ ಕಾರ್ಯಕ್ಕೆ ಜಿಮ್ಸ್ ನಿರ್ದೇಶಕ ಡಾ. ಬಸವರಾಜ ಬೊಮ್ಮನಳ್ಳಿ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.

---

# ಎಂ.ಬಿ.ಎಚ್. ಮಹಾವಿದ್ಯಾಲಯದಲ್ಲಿ 'ಫನ್ ವೀಕ್'

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ವಿದ್ಯಾದಾನ ಸಮಿತಿಯ ಶ್ರೀಮತಿ ಎಂ.ಬಿ. ಹುಯಿಲಗೋಳ ಶಿಕ್ಷಣ ಮಹಾವಿದ್ಯಾಲಯದಲ್ಲಿ ಒಂದು ವಾರದಿಂದ ಹಮ್ಮಿಕೊಂಡ 'ಫನ್ ವೀಕ್' ಕಾರ್ಯಕ್ರಮದ ಕೊನೆಯ ದಿನದಂದು ಪ್ರಶಿಕ್ಷಣಾರ್ಥಿಗಳೆಲ್ಲರೂ ಸಾಂಪ್ರದಾಯಿಕ ವಿವಾಹದ ಉಡುಗೆಯನ್ನು ಧರಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು.

ವಿದ್ಯಾದಾನ ಸಮಿತಿಯ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ, ಪ್ರಾಚಾರ್ಯ ಡಾ. ಗಂಗೂಬಾಯಿ ಪವಾರ, ಸಮಿತಿಯ ಅಂಗ ಸಂಸ್ಥೆಗಳಾದ ಜೆ.ಎನ್. ಕಲಾ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಬಿ.ಎಲ್. ಚವಾಣ್




ಹಾಗೂ ಉಪನ್ಯಾಸಕರು, ವಿ.ಡಿ.ಎಸ್. ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರಾಚಾರ್ಯ ಡಾ. ಬಿ.ಎಸ್. ರಾಠೋಡ ಹಾಗೂ ಉಪನ್ಯಾಸಕರು, ವಿ.ಡಿ.ಎಸ್. ಬಾಲಕರ ಪದವಿಪೂರ್ವ ಕಾಲೇಜಿನ ಹಿರಿಯ ಉಪನ್ಯಾಸಕ ಕಿಶೋರಬಾಬು ನಾಗರಕಟ್ಟಿ, ವಿ.ಡಿ.ಎಸ್. ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಆರ್.ಆರ್. ಜಾಲಿಹಾಳ ಹಾಗೂ ಶಿಕ್ಷಕರು, ವಿ.ಡಿ.ಎಸ್. ಕನ್ನಡ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಎಂ.ವಿ. ಹವಾಲ್ದಾರ ಹಾಗೂ ಸಿಬ್ಬಂದಿ ವರ್ಗದವರು, ವಿ.ಡಿ.ಎಸ್ ಕ್ಲಾಸಿಕ್ ಶಾಲೆಯ ಪ್ರಾಚಾರ್ಯರಾದ ಎಂ.ಆರ್. ಡೊಳ್ಳಿನ, ಶಕುಂತಲಾ ಪಾಟೀಲ ನರ್ಸಿಂಗ್ ಕಾಲೇಜಿನ ಚೇರಮನ್ ಡಿ.ಬಿ. ಪಾಟೀಲ, ಸ್ಪರ್ಶ ನರ್ಸಿಂಗ್ ಕಾಲೇಜಿನ ಆಡಳಿತಾಧಿಕಾರಿ ರಂಗನಾಥ ಎಂ.ವಿ ಪಾಲ್ಗೊಂಡು ಮೆಚ್ಚುಗೆ ವ್ಯಕ್ತಪಡಿಸಿದರು.

---

# ಸಕ್ರಿಯತೆಯಿಂದ ಮನೋಲ್ಲಾಸ ಸಾಧ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ನಮ್ಮ ನಕಾರಾತ್ಮಕ ಗುಣಗಳು ಹಾರ್ಮೋನ್‌ಗಳ ಸ್ರವಿಸುವಿಕೆಯನ್ನು ನಿಷ್ಕ್ರಿಯಗೊಳಿಸುತ್ತವೆ. ಅದು ಅನೇಕ ವ್ಯಾಧಿಗಳಿಗೆ ದಾರಿ ಮಾಡಿಕೊಡುತ್ತದೆ. ಆದ್ದರಿಂದ ನಾವು ಯಾವಾಗಲೂ ಸಕಾರಾತ್ಮಕ ಗುಣಗಳನ್ನು ಹೊಂದಿ ಸಕ್ರಿಯವಾಗಿ ಎಲ್ಲದರಲ್ಲೂ ಪಾಲ್ಗೊಳ್ಳುವುದರಿಂದ ನಮ್ಮ ಮನಸ್ಸು ಉತ್ಸಾಹದಿಂದಿರುತ್ತದೆ ಎಂದು ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಪ್ರಾಧ್ಯಾಪಕಿ ಡಾ. ಸುವರ್ಣಾ ನಿಡಗುಂದಿ ಹೇಳಿದರು.

ನಗರದ ಶ್ರೀ ಕರಿಯಮ್ಮ ದೇವಿ ಮಹಿಳಾ ಮಂಡಳವು ಆಚರಿಸಿದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯಲ್ಲಿ ಅವರು ಮಾತನಾಡಿ, ಮಹಿಳೆಯು ತನ್ನ ದೈನಂದಿನ ಚಟುವಟಿಕೆಗಳ ನಡುವೆಯೂ ತನ್ನ ಬಗ್ಗೆ ಸ್ವಲ್ಪ ಕಾಳಜಿ ವಹಿಸಿದರೆ ಮುಂದೆ ಬರಬಹುದಾದ ಅನೇಕ ಕಾಯಿಲೆಗಳನ್ನು ದೂರವಿಡಬಹುದು. ಪ್ರಸನ್ನ ಚಿತ್ತ ಮನಸ್ಸು ಸದಾ ಚೈತನ್ಯವಿರುವಂತೆ ಮಾಡುತ್ತದೆ ಎಂದರು.

ಸಂಘದ ಕಾರ್ಯದರ್ಶಿ ಅನಿತಾ ಜಕಬಾಳ ಪ್ರಸ್ತಾವಿಕವಗಿ ಮಾತನಾಡಿ, ಒಂದು ಮಗುವನ್ನು ಸತ್ಪ್ರಜೆಯನ್ನಾಗಿ ಮಾಡುವಲ್ಲಿ ತಾಯಿಯ ಪಾತ್ರ ಪ್ರಮುಖವಾಗಿದೆ ಎಂದು ಹೇಳಿದರು.

ಡಾ. ಸಂಗೀತಾ ಹುಡೇದ ಮಾತನಾಡಿ, ಮಹಿಳೆಯು ಮಾತೃತ್ವ, ನೇತೃತ್ವ ಹಾಗು ಕರ್ತೃತ್ವ ಎಂಬ ತತ್ವದ ಅಡಿಯಲ್ಲಿ ತನ್ನನ್ನು ತಾನು ನಿರೂಪಿಸುತ್ತಾ ಬಂದು, ಯಶಸ್ಸಿನ ಮುಂಚೂಣಿಯಲ್ಲಿ ನಿಂತಿದ್ದಾಳೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿ ಮಾತನಾಡಿದ ರೇಣುಕಾ ಕೇಸರಿ ಮಾತನಾಡಿದರು. ಅನ್ನಪೂರ್ಣಾ ಹುಳ್ಳಿ, ಪುಷ್ಪಲತಾ ಚಿಕ್ಕನ್ನವರ ಪ್ರಾರ್ಥಿಸಿದರು. ತನುಜಾ ಗೋವಿಂದಪ್ಪನವರ ಸ್ವಾಗತಿಸಿದರು.

ಲಕ್ಷ್ಮವ್ವ ಕುರಿಯವರು ಪುಷ್ಪಾರ್ಪಣೆಗೈದರು. ಶ್ರೀದೇವಿ ಗುಡ್ಲಾನೂರ ವಂದಿಸಿದರು. ನಿರ್ಮಲಾ ಹವಳನ್ನವರ ನಿರೂಪಿಸಿದರು. ಅನ್ನಪೂರ್ಣಾ ದೇವರವರ ಹಾಗೂ ಅಕ್ಕಮಹಾದೇವಿ ಕಳ್ಳಿಯವರು ಊಟದ ನಿರ್ವಹಣೆ ಮಾಡಿದರು.

---

# ಪುರಸಭೆಯ ಕ್ರಮಕ್ಕೆ ಮಾಂಸ ಮಾರಾಟಗಾರರ ವಿರೋಧ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಾಲ್ಕಿ ಹಕ್ಕಿನಲ್ಲಿರುವ(ಸ್ವಂತ) ಅಂಗಡಿಯಲ್ಲಿ ಹಿಂದಿನಿಂದಲೂ ಕೋಳಿ ಮಾಂಸ ವ್ಯಾಪಾರ ಮಾಡುತ್ತಾ ಬರುತ್ತಿರುವುದನ್ನು ಬಂದ್ ಮಾಡಬೇಕು ಎಂಬ ಪುರಸಭೆಯವರ ಕ್ರಮ ವಿರೋಧಿಸಿ ಪಟ್ಟಣದ ನನ್ನುಸಾಬ ಹುಸೇನಸಾಬ ಮಕಾನದಾರ ಕುಟುಂಬದವರು ಮಂಗಳವಾರ ಪುರಸಭೆ ಎದುರು ಪ್ರತಿಭಟನೆ ನಡೆಸಿದರು.

ಈ ವೇಳೆ ನನ್ನುಸಾಬ ಮಕಾನದಾರ ಮಾತನಾಡಿ, ವ್ಯಾಪಾರ ಮಾಡುತ್ತಿರುವ ಜಾಗೆಯು ನನ್ನ ತಂದೆಯವರ ಹೆಸರಿನಲ್ಲಿದೆ. ಇಲ್ಲಿ ಹಲವಾರು ವರ್ಷಗಳಿಂದ ಕೋಳಿ ಮಾಂಸ ಮಾರಾಟ ಮಾಡುತ್ತಿದ್ದೇವೆ.



ಅಲ್ಲದೆ ಕೋಳಿ ಮಾಂಸ ವ್ಯಾಪಾರಕ್ಕಾಗಿ ಪುರಸಭೆಯಿಂದ ಲೈಸನ್ಸ್ ಸಹ ಪಡೆದಿರುತ್ತೇವೆ. ಆದರೆ ಪುರಸಭೆ ಅಧಿಕಾರಿಗಳು ಪದೇ ಪದೇ ಅಂಗಡಿಗೆ ಬಂದು ನಮಗೆ ಅಂಗಡಿ ತೆರವು ಮಾಡುವಂತೆ ಒತ್ತಾಯಿಸುತ್ತಿದ್ದಾರೆ. ಇದರಿಂದ ಮಾನಸಿಕವಾಗಿ ನಾವು ನೊಂದುಕೊಂಡಿದ್ದು, ಪುರಸಭೆಯುವರ ಕ್ರಮ ಖಂಡಿಸಿ ಪ್ರತಿಭಟನೆಗೆ ಇಳಿದಿದ್ದೇವೆ. ಇದನ್ನು ಕೂಡಲೇ ನಿಲ್ಲಿಸಬೇಕೆಂದು ವಿನಂತಿಸಿದರು.

ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ ಸ್ಥಳಕ್ಕೆ ಆಗಮಿಸಿ ಪ್ರತಿಭಟನಾನಿರತರ ಅಹವಾಲು ಆಲಿಸಿ, ಪುರಸಭೆಯವರು ಯಾರ ವಿರುದ್ಧವೂ ವೈಯಕ್ತಿಕ ದ್ವೇಷ ಮಾಡುವುದಿಲ್ಲ. ಕಾನೂನಿನನ್ವಯ ಮತ್ತು ಮೇಲಾಧಿಕಾರಿಗಳ ಸೂಚನೆಯಂತೆ ಕ್ರಮ ಕೈಗೊಂಡಿರುತ್ತಾರೆ. ಈ ಕುರಿತಂತೆ ಕೂಲಂಕುಷವಾಗಿ ಪರಿಶೀಲಿಸಿ ಕಾನೂನು ಪ್ರಕಾರ ಕ್ರಮ ಜರುಗಿಸುತ್ತೇವೆ ಎಂದು ಹೇಳಿದ ನಂತರ ಪ್ರತಿಭಟನೆ ಕೈಬಿಡಲಾಯಿತು.

ಈ ವೇಳೆ ನೂರಅಹ್ಮದ್ ಮಕಾನದಾರ, ಸೈಯದ್ ಮಕಾನದಾರ, ಮಹ್ಮದ್‌ಹನೀಫ್ ಮಕಾನದಾರ, ಮಹ್ಮದ್‌ಸಾದಿಕ್ ಮಕಾನದಾರ, ಪಿರಾಂಭಿ ಮಕಾನದಾರ, ಅಮೀನಬೀ ಮಕಾನದಾರ, ಜುಬೇದಾ ಮಕಾನದಾರ, ಜಬೀನಾ ಮಕಾನದಾರ, ಪರ್ವಿನ್ ಮಕಾನದಾರ ಸೇರಿದಂತೆ ಅನೇಕರಿದ್ದರು.

---

# ಜ್ಞಾನಸ್ಫೂರ್ತಿ ಶಾಲಾ ವಾರ್ಷಿಕ ಸ್ನೇಹ ಸಮ್ಮೇಳನ ಇಂದು

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಇಲ್ಲಿನ ಬರದೂರ ಗ್ರಾಮದಲ್ಲಿ ಮಾರ್ಚ್ 13ರಂದು ಸಾಯಂಕಾಲ 6 ಗಂಟೆಗೆ ಚಟ್ಟೇರ ವಿದ್ಯಾವರ್ಧಕ ಸಂಘ, ಬಿಳಗಿ ಶ್ರೀ ಈಶ್ವರಪ್ಪ ಎಂ.ನಾಡಗೌಡ್ರ ಮತ್ತು ಬಾಳಪ್ಪ ನಾಡಗೌಡ್ರ ಇವರ ಸ್ಮರಣಾರ್ಥವಾಗಿ ಜ್ಞಾನಸ್ಫೂರ್ತಿ ಇಂಟರ್ನ್ಯಾಷನಲ್ ಶಾಲೆ, ಪೂರ್ವ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ 1ರಿಂದ 5ನೇ ತರಗತಿ ಶಾಲಾ ಕಟ್ಟಡ ಉದ್ಘಾಟನೆ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವನ್ನು ನಂದಿವೇರಿ ಸಂಸ್ಥಾನಮಠದ ಶಿವಕುಮಾರ ಮಹಾಸ್ವಾಮಿಗಳು ವಹಿಸಲಿದ್ದು, ಉದ್ಘಾಟನೆಯನ್ನು ಕಾನೂನು, ಪ್ರವಾಸೋದ್ಯಮ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ್ ನೆರವೇರಿಸುವರು. ಮಾಜಿ ಸಚಿವ ಎಸ್.ಎಸ್. ಪಾಟೀಲ್, ಮಾಜಿ ಶಾಸಕ ಡಿ.ಆರ್. ಪಾಟೀಲ್ ಜ್ಯೋತಿ ಬೆಳಗಿಸುವರು. ರೋಣ ಶಾಸಕ ಜಿ.ಎಸ್. ಪಾಟೀಲ್, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಪಾಲ್ಗೊಳ್ಳಲಿದ್ದು, ಅಧ್ಯಕ್ಷತೆಯನ್ನು ಚಟ್ಟೇರ್ ವಿದ್ಯಾವರ್ಧಕ ಸಂಸ್ಥೆಯ ಬೀಳಗಿ ಡಾ. ಪಾರ್ವತಿ ಮೋಹನ ಚಟ್ಟೇರ್, ಉಪಾಧ್ಯಕ್ಷ ವೀರನಗೌಡ ನಾಡಗೌಡರ ವಹಿಸುವರು.

ಸಂಗೀತ ರಸಮಂಜರಿ ಕಾರ್ಯಕ್ರಮದಲ್ಲಿ ಬಿಗ್‌ಬಾಸ್ ಖ್ಯಾತಿಯ ಹನಮಂತ ಲಮಾಣಿ, ಮಹನ್ಯ ಗುರು ಪಾಟೀಲ್ ಪಾಲ್ಗೊಳ್ಳಲಿದ್ದು, ಮುಖ್ಯ ಅತಿಥಿಗಳಾಗಿ ಗದಗ ಡಿ.ಡಿ.ಪಿ.ಐ ಆರ್.ಎಸ್. ಬುರಡಿ, ಕ್ಷೇತ್ರ ಶಿಕ್ಷಣಾಧಿಕಾರಿ ಹೆಚ್.ಎಂ. ಪಡ್ನೇಶಿ, ಗಂಗಾಧರ ಅಣ್ಣಿಗೇರಿ, ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ, ಮಹೇಶ ಪೋತೆದಾರ, ಕೊಪ್ಪಳ ಅಸಿಸ್ಟಂಟ್ ಕಮೀಶನರ್ ಕ್ಯಾಪ್ಟನ್ ಮಾಲಗಿತ್ತಿ, ಕುರಿ ಉಣ್ಣೆ ನಿಗಮದ ಮಾಜಿ ಅಧ್ಯಕ್ಷ ವಾಯ್.ಎನ್. ಗೌಡರ್, ಎಂ.ಎಚ್. ಗಚೆಣ್ಣವರ, ಈರಣ್ಣ ಚಟ್ಟೇರ್, ಗುರುಮೂರ್ತಿಸ್ವಾಮಿ ಇನಾಮದಾರ, ಎಂ.ಐ. ನಾಡಗೌಡ್ರ, ಎನ್.ಎಂ. ಕುಕನೂರ, ಹೆಚ್. ಎನ್. ಗೌಡ್ರ, ಎಲ್.ಬಿ. ಹುಡೇದ ಮುಂತಾದವರು ಪಾಲ್ಗೊಳ್ಳುವರು ಎಂದು ಕಾರ್ಯದರ್ಶಿ ಮೋಹನ ಮಹಾಲಿಂಗಪ್ಪ ಚಟ್ಟೇರ್ ಪತ್ರಿಕಾ ಪ್ರಕಟಣೆಗೆ ತಿಳಿಸಿದ್ದಾರೆ.

---

# ವೈದ್ಯಕೀಯ ನೆರವು ಹೆಚ್ಚಳಕ್ಕೆ ಸ್ವಾಗತ

**■ವಿಜಯಸಾಕ್ಷಿ ಸುದ್ದಿ, ಗದಗ**

ಸಿಎಂ ಸಿದ್ದರಾಮಯ್ಯನವರು ಮಂಡಿಸಿದ ರಾಜ್ಯ ಬಜೆಟ್‌ನಲ್ಲಿ ಕಟ್ಟಡ ಮತ್ತು ನಿರ್ಮಾಣ ಕಾರ್ಮಿಕರು ಸ್ವಾಭಾವಿಕ ಮರಣ ಹೊಂದಿದಲ್ಲಿ ಪರಿಹಾರ ಧನವನ್ನು 75 ಸಾವಿರ ರೂನಿಂದ 1.50 ಲಕ್ಷಕ್ಕೆ, ಕೆಲಸದ ಸ್ಥಳದಲ್ಲಿ ಅಪಘಾತದಿಂದ ಮರಣ ಹೊಂದಿದಲ್ಲಿ 5 ಲಕ್ಷದಿಂದ 8 ಲಕ್ಷಕ್ಕೆ ಹೆಚ್ಚಿಸಿರುವ ತೀರ್ಮಾನವನ್ನು ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕ ಸಂಘದ ಗದಗ ಜಿಲ್ಲಾ ಸಮಿತಿ ಕಾರ್ಮಿಕರ ಫೆಡರೇಷನ್ (CWFI) ಸ್ವಾಗತಿಸಿದೆ.

ಆದರೆ 6ರಿಂದ 12ನೇ ತರಗತಿಯವರೆಗೆ ವಸತಿ ಶಾಲೆಗಳನ್ನು ಎಲ್ಲಾ 31 ಜಿಲ್ಲೆಗಳಲ್ಲಿ ಸ್ಥಾಪಿಸುವ ಹೆಸರಲ್ಲಿ ಕಲ್ಯಾಣ ಮಂಡಳಿ ನಿಧಿ 750 ಕೋಟಿ ರೂಪಾಯಿಗಳನ್ನು ಬಳಕೆ ಮಾಡಲಾಗುವುದು ಎನ್ನುವ ಪ್ರಸ್ತಾವಕ್ಕೆ ವಿರೋಧವನ್ನು ವ್ಯಕ್ತಪಡಿಸಿದೆ. ಈಗಾಗಲೇ ಇರುವ ಸರ್ಕಾರಿ ವಸತಿ ಶಾಲೆಗಳಲ್ಲಿ ಕಟ್ಟಡ ನಿರ್ಮಾಣ ಕಾರ್ಮಿಕರ ಮಕ್ಕಳು ಶಿಕ್ಷಣ ಪಡೆಯುತ್ತಿದ್ದಾರೆ. ಅಲ್ಲದೆ ಕಲ್ಯಾಣ ಕಾರ್ಯಕ್ರಮಗಳನ್ನು ಜಾರಿಗೊಳಿಸುವುದು ಕಟ್ಟಡ ಕಾರ್ಮಿಕ ಕಲ್ಯಾಣ ಮಂಡಳಿ ಕೆಲಸವೇ ಹೊರತು ವಸತಿ ಶಾಲೆ ತೆರೆಯುವುದಲ್ಲ. ಈ ಬಗ್ಗೆ ಮಾನ್ಯ ಮುಖ್ಯಮಂತ್ರಿಗಳಿಗೆ ತಪ್ಪು ಮಾಹಿತಿ ನೀಡಲಾಗಿದೆ ಎಂದಿದ್ದಾರೆ.

## 24 ದಲಿತರ ಸಾಮೂಹಿಕ ಹತ್ಯೆ ಪ್ರಕರಣ | 44 ವರ್ಷಗಳ ಬಳಿಕ ತೀರ್ಪು ಪ್ರಕಟ; ಮೂವರು ದೋಷಿಗಳೆಂದ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶದ ಫಿರೋಝಾಬಾದ್ ಜಿಲ್ಲೆಯ ದಿಹುಲಿ ಗ್ರಾಮದಲ್ಲಿ ಏಳು ಮಹಿಳೆಯರು ಮತ್ತು ಇಬ್ಬರು ಅಪ್ರಾಪ್ತ ವಯಸ್ಕರು ಸೇರಿದಂತೆ 24 ದಲಿತರ ಹತ್ಯೆ ನಡೆದು ಸುಮಾರು 44 ವರ್ಷಗಳ ನಂತರ, ವಿಚಾರಣಾ ನ್ಯಾಯಾಲಯವು ಮೂವರು ಆರೋಪಿಗಳನ್ನು ದೋಷಿಗಳು ಎಂದು ಘೋಷಿಸಿದೆ.

ಕ್ರಿಮಿನಲ್ ಗ್ಯಾಂಗ್ ಒಂದರ ವಿರುದ್ಧ ದಿಹುಲಿ ಗ್ರಾಮದ ಕೆಲ ಜನರು ಸಾಕ್ಷ್ಯ ನುಡಿದ ನಂತರ 24 ದಲಿತರ ಹತ್ಯಾಕಾಂಡ ನಡೆದಿತ್ತು. ಹತ್ಯೆ ಮಾಡಿದ ಕ್ರಿಮಿನಲ್ ಗ್ಯಾಂಗ್‌ನ ಸದಸ್ಯರು ಹೆಚ್ಚಾಗಿ ಪ್ರಬಲ ಜಾತಿಗೆ ಸೇರಿದವರಾಗಿದ್ದರು.

"ಸಾಮೂಹಿಕ ಹತ್ಯೆ ಪ್ರಕರಣದಲ್ಲಿ ಮೂವರು ವ್ಯಕ್ತಿಗಳನ್ನು ದೋಷಿಗಳು ಎಂದು ನ್ಯಾಯಾಲಯ ಮಂಗಳವಾರ (ಮಾ.11) ತೀರ್ಪು ನೀಡಿದೆ. ಮೂವರು ಅಪರಾಧಿಗಳ ಪೈಕಿ ಜೈಲಿನಲ್ಲಿರುವ ರಾಮ್ ಸೇವಕ್ ಎಂಬಾತ ಅಲ್ಲಿಂದಲೇ ನ್ಯಾಯಾಲಯಕ್ಕೆ ಹಾಜರಾಗಿದ್ದರು. ಜಾಮೀನಿನ ಮೇಲೆ ಹೊರಗಿದ್ದ ಕಪ್ತಾನ್ ಅವರನ್ನು ತಪ್ಪಿತಸ್ಥರೆಂದು ಸಾಬೀತಾದ ನಂತರ ವಶಕ್ಕೆ ಪಡೆಯಲಾಗಿದೆ.

ಮೂರನೇ ಅಪರಾಧಿ ರಾಂಪಾಲ್ ನ್ಯಾಯಾಲಯಕ್ಕೆ ಗೈರಾಗಿದ್ದರು. ವಿನಾಯಿತಿ ನೀಡುವಂತೆ ಕೋರಿದ್ದ ಅವರ ಮನವಿಯನ್ನು ತಿರಸ್ಕರಿಸಿದ್ದರೂ ನ್ಯಾಯಾಲಯಕ್ಕೆ ಬಂದಿಲ್ಲ. ಹಾಗಾಗಿ, ಅವರ ವಿರುದ್ಧ ಜಾಮೀನು ರಹಿತ ವಾರಂಟ್ ಹೊರಡಿಸಲಾಗಿದೆ" ಎಂದು ಸರ್ಕಾರಿ ವಕೀಲ (ಮೈನ್‌ಪುರಿ) ರೋಹಿತ್ ಶುಕ್ಲಾ ಮಾಧ್ಯಮಗಳಿಗೆ ತಿಳಿಸಿದ್ದಾರೆ.

### ಹೊಸೂರಿನ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವದಲ್ಲಿ ಬಿಇಒ ಬಿ.ವಿ. ನಡುವಿನಮನಿ

# ಮಕ್ಕಳ ಉಜ್ವಲ ಭವಿಷ್ಯಕ್ಕೆ ನೆರವಾಗಿ

■ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಶಾಲೆ ಒಂದು ಶೈಕ್ಷಣಿಕ ಪರಿವಾರ. ಈ ಪರಿವಾರದಲ್ಲಿ ಶಾಲಾ ಆಡಳಿತ ಮಂಡಳಿ, ಶಿಕ್ಷಕರು ಹಾಗೂ ಪೋಷಕರು ಪ್ರತಿ ವಿದ್ಯಾರ್ಥಿಯ ಮೇಲೆ ಸಮಪ್ರಮಾಣದ ಜವಾಬ್ದಾರಿ, ಹಕ್ಕನ್ನು ಹೊಂದಿರುತ್ತಾರೆ. ಹೆತ್ತವರು ತಮ್ಮ ಮಕ್ಕಳ ಉಜ್ವಲ ಭವಿಷ್ಯಕ್ಕಾಗಿ, ವ್ಯಕ್ತಿತ್ವ ವಿಕಸನಕ್ಕೆ ಪೂರಕವಾದ ಸಹಕಾರ ನೀಡುವಲ್ಲಿ ಗಮನಹರಿಸಬೇಕು ಎಂದು ಗ್ರಾಮೀಣ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ವಿ. ನಡುವಿನಮನಿ ಹೇಳಿದರು. ಗದಗ ತಾಲೂಕಿನ ಹೊಸೂರು ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ನೂತನ ಪೂರ್ವ ಪ್ರಾಥಮಿಕ ಶಾಲಾ ಕೊಠಡಿ ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಅವರು ಮಾತನಾಡಿದರು. ಸುದೈವ ಎನ್ನುವಂತೆ ಮೊದಲ ಪ್ರಯತ್ನದಲ್ಲೇ ಪೂರ್ವ ಪ್ರಾಥಮಿಕ ಶಾಲೆಗೆ ಅನುಮತಿ ದೊರೆತು, ಇಂದು ಉದ್ಘಾಟನೆಗೊಂಡಿದೆ. ಇದರಿಂದ ಚಿಕ್ಕಮಕ್ಕಳನ್ನು ಪಾಲಕರು ಪರ ಊರಿಗೆ ಕರೆದೊಯ್ಯವದು ತಪ್ಪಿದಂತಾಗಿದ್ದು, ಇದರಿಂದ ಪಾಲಕರಿಗೂ ಸಾಕಷ್ಟು ಅನುಕೂಲವಾಗಿದೆ. ಸರ್ಕಾರಿ ಶಾಲೆಗಳು ಇಂದು




ನಿಸ್ವಾರ್ಥದಿಂದ, ಪಾರದರ್ಶಕವಾಗಿ, ಹಂತ ಹಂತವಾಗಿ ಅಭಿವೃದ್ಧಿಗೊಳ್ಳುತ್ತಿವೆ ಎಂದರೆ ಅದಕ್ಕೆ ಗ್ರಾಮಸ್ಥರ ಹಾಗೂ ನಾಗೇಶ ಹುಬ್ಬಳ್ಳಿಯವರಂಥ ದಾನಿಗಳ ಕೊಡುಗೆ ಅಪಾರವಾದದ್ದು. ಹೀಗಾಗಿ ಸರ್ಕಾರಿ ಶಾಲೆಯಲ್ಲಿನ ಶಿಕ್ಷಕರು ಶಾಲೆಯಲ್ಲಿ ಮಾದರಿ ಶಿಕ್ಷಕರಾಗಿ ವಿದ್ಯಾರ್ಥಿಗಳ ಬದುಕಿನಲ್ಲಿ ಪ್ರೇರಕ ಶಕ್ತಿಯಾಗುವಲ್ಲಿ ಪ್ರಯತ್ನಿಸಬೇಕು ಎಂದರು. ನೀರಾವರಿ ಇಲಾಖೆಯ ಸಹಾಯಕ ಕೃಷಿ ಅಧಿಕಾರಿ ಎಫ್‌ಎಸ್. ಗುರಿಕಾರ ಮಾತನಾಡಿದರು. ಇದೇ ವೇಳೆ, ಶಾಲಾ ಆವರಣದಲ್ಲಿ ಪ್ರಾರಂಭವಾದ ನೂತನ ಪೂರ್ವ ಪ್ರಾಥಮಿಕ ಶಾಲೆಯನ್ನ ನಾಗೇಶ ಹುಬ್ಬಳ್ಳಿ, ಬಿ.ವಿ. ನಡುವಿನಮನಿ, ಎಸ್‌ಡಿಎಂಸಿ ಸದಸ್ಯರು, ಗ್ರಾ.ಪಂ ಸದಸ್ಯರು ಸೇರಿದಂತೆ ಗ್ರಾಮದ ಹಿರಿಯರ ಸಮ್ಮುಖದಲ್ಲಿ ಉದ್ಘಾಟಿಸಲಾಯಿತು. ದೇಣಿಗೆ ನೀಡಿದ ನಾಗೇಶ ಹುಬ್ಬಳ್ಳಿ, ಶಾಲೆಗೆ ಭೂದಾನ ಮಾಡಿದ ರೇಣುಕಾ ಹಂಚಿನಾಳ, ನೀರಿನ ಟ್ಯಾಂಕ್ ವ್ಯವಸ್ಥೆ ಕಲ್ಪಿಸಿದ ಎಫ್.ಎಸ್. ಗುರಿಕಾರ ಹಾಗೂ ಇನ್ನಿತರ ಸಹಕಾರ ನಿಡಿದ ಪ್ರಭಯ್ಯ ದೇಸಾಯಿಮಠ, ಬಸವರಾಜ ಗುಳಣವರ ಅವರನ್ನ ಶಾಲಾ ಆಡಳಿತ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಸಿಆರ್‌ಪಿ ಎಸ್.ಜಿ. ಚವಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಶಿಕ್ಷಕರಾದ ಎಂ.ಜಿ. ಮಳ್ಳೂರ ಸ್ವಾಗತಿಸಿದರೆ, ಎಸ್.ಬಿ. ಭಜಂತ್ರಿ ನಿರೂಪಿಸಿದರು. ವಿಶ್ವನಾಥ ಬಡಿಗೇರ ವಂದಿಸಿದರು. ಕಾರ್ಯಕ್ರಮದಲ್ಲಿ ಶಾಲಾ ಎಸ್‌ಡಿಎಂಸಿ ಅಧ್ಯಕ್ಷರಾದ ಯಲ್ಲಪ್ಪ ಕಲ್ಯಾಣಿ, ಮಾಜಿ ಅಧ್ಯಕ್ಷ ಎಸ್.ಎಚ್. ತಳವಾರ, ಗ್ರಾ.ಪಂ ಸದಸ್ಯರಾದ ಶಿವಯ್ಯ ಮನಗೇಣಿ, ಮುತ್ತಪ್ಪ ಮುಳಗುಂದ, ಪಾರ್ವತವ್ವ ಕಲ್ಯಾಣಿ, ಕಾಂಗ್ರೆಸ್ ಮುಖಂಡ ಅಜ್ಜಪ್ಪ ಹುಗ್ಗೆಣ್ಣವರ, ಗ್ರಾಮದ ಹಿರಿಯರಾದ, ಬಸಪ್ಪ ಸೋಗಿ, ಚಂದ್ರಪ್ಪ ಹೊಂಬಣ್ಣವರ, ಶಿಕ್ಷಕರಾದ ರವಿ ಪೂಜಾರ, ಕವಿತಾ ತಳವಾರ, ಲಾವಣ್ಯ ದೇಸಾಯಿ ಇನ್ನಿತರರು ಪಾಲ್ಗೊಂಡಿದ್ದರು.

ದಾನಿಗಳಾದ ಮುಂಡರಗಿ ಪುರಸಭೆ ಉಪಾಧ್ಯಕ್ಷರಾದ ನಾಗೇಶ ಹುಬ್ಬಳ್ಳಿ ಮಾತನಾಡಿ, ಸರ್ಕಾರಿ ಶಾಲೆಗಳು ಮುಚ್ಚುವ ಹಂತಕ್ಕೆ ಬಂದಿವೆ ಅಂದರೆ, ಅವುಗಳಿಗೆ ಪ್ರೋತ್ಸಾಹದ ಅವಶ್ಯಕತೆಯಿದೆ. ಎಲ್ಲವನ್ನೂ ಸರ್ಕಾರವೇ ನಿಭಾಯಿಸಬೇಕು ಅಂದರೆ ಅಸಾಧ್ಯ. ಅದಕ್ಕೆ ಗ್ರಾಮಸ್ಥರ ಹಾಗೂ ದಾನಿಗಳ ಸಹಕಾರ ಅತ್ಯಗತ್ಯ. ಹೊಸೂರು ಶಾಲೆಗೆ ಸ್ಮಾರ್ಟ್ ಟಿವಿ ಅವಶ್ಯಕತೆಯಿದೆ ಎಂದು ತಿಳಿದಾಗ, ತಕ್ಷಣ ಅದರ ವೆಚ್ಚವನ್ನು ಪೂರೈಸುವುದಾಗಿ ವಾಗ್ದಾನ ಮಾಡಿದ್ದೆ. ಆ ಪ್ರಕಾರ ಇಂದು 50 ಸಾವಿರ ರೂ.ಗಳನ್ನು ಶಾಲಾ ಆಡಳಿತ ಮಂಡಳಿಗೆ ನೀಡಿರುವುದು ಸಾಮಾಜಿಕ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿದ ಸಂತೃಪ್ತಿ ನನ್ನದಾಗಿದೆ ಎಂದರು.

### ಶ.ಸಾ.ಪ ನೂತನ ಪದಾಧಿಕಾರಿಗಳ ಸೇವಾ ದೀಕ್ಷೆ ಕಾರ್ಯಕ್ರಮದಲ್ಲಿ ಡಾ. ಲೋಕಾಪೂರ

# ವಚನಗಳು ಪರಮಾನಂದದ ಬುತ್ತಿ

■ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಶಿವಶರಣರು ರಚಿಸಿದ ವಚನ ಸಾಹಿತ್ಯವು ಜನ ಸಾಮಾನ್ಯರು ಸಹಜ ರೀತಿಯಲ್ಲಿ, ನೆಮ್ಮದಿಯ ಬದುಕು ಕಟ್ಟಿಕೊಳ್ಳಲು ಸಹಕಾರಿಯಾಗಿದೆ. ವಚನಗಳಲ್ಲಿನ ನಡೆ-ನುಡಿ, ವಿಚಾರಧಾರೆ ಸುಂದರ ಬದುಕಿನ ಅಡಿಪಾಯವಾಗಿದೆ ಎಂದು ಹಿರಿಯ ಸಾಹಿತಿ ಡಾ. ಸಂಗಮನಾಥ ಲೋಕಾಪೂರ ಹೇಳಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು ಅಣ್ಣಿಗೇರಿ ತಾಲೂಕಾ ಘಟಕವು ಸ್ಥಳೀಯ ಸರ್ವಜ್ಞ ನಗರ(ದೇಶಪಾಂಡೆ ಪ್ಲಾಟ್) ದಲ್ಲಿ ತಾಲೂಕಾ ಶ.ಸಾ.ಪ ಯುವ ಘಟಕದ ಅಧ್ಯಕ್ಷ ಕಿರಣ ಬೂದಿಹಾಳ ಅವರ ಮಹಾಮನೆ ಬಸವಚೇತನದ ಪ್ರಾಂಗಣದಲ್ಲಿ ಏರ್ಪಡಿಸಿದ್ದ ನೂತನ ಪದಾಧಿಕಾರಿಗಳ ಸೇವಾ




ದೀಕ್ಷೆ ಮತ್ತು ಲಿಂ. ಬಸನಗೌಡ ಪಾಟೀಲ (ಅಡ್ನೂರು) ದತ್ತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶರಣರ ಬದುಕು ಆದರ್ಶಪ್ರಾಯವಾದುದು. ಸ್ವಾರ್ಥಕ್ಕಿಂತ ಸಾಮುದಾಯಿಕ ಕ್ಷೇಮವನ್ನೇ ತಮ್ಮ ನಡೆ-ನುಡಿಗಳಲ್ಲಿ ಅಳವಡಿಸಿಕೊಂಡಿದ್ದ ಶರಣರು ಅಭಿಮಾನಕ್ಕಿಂತ ಅಭಿವೃದ್ಧಿ ದೊಡ್ಡದೆಂದು ಸಾಧಿಸಿ ತೋರಿಸಿದರು. ಮನುಷ್ಯ ಜನ್ಮಕ್ಕೆ ಪರಮಾನಂದ ಪ್ರಾಪ್ತಿಯಾಗುವದು ಪರಿಶ್ರಮದಿಂದ ಮಾತ್ರವೆಂಬುದನ್ನು ತೋರಿಸಿದವರು ನಮ್ಮ ಶರಣರು ಎಂದು ಹೇಳಿದರು.

ದತ್ತಿ ದಾನಿ ಅಡ್ನೂರಿನ ಬಸನಗೌಡ ಪಾಟೀಲ ಸ್ಮರಣಾರ್ಥ ಜಾನಪದ ಹಾಡುಗಳಲ್ಲಿ ಶರಣರ ನೆನಹು ಎಂಬ ವಿಷಯದ ಮೇಲೆ ಜಾನಪದ ತಜ್ಞ ಡಾ. ರಾಮೂ ಮೂಲಗಿ ಉಪನ್ಯಾಸ ನೀಡಿದರು. ಅಧ್ಯಕ್ಷತೆ ವಹಿಸಿದ್ದ ವಿಶ್ರಾಂತ ಪ್ರಾಚಾರ್ಯ ಎಸ್.ಎಸ್. ಹರ್ಲಾಪೂರ ಮಾತನಾಡಿ, ನಾಳಿನ ನಾಗರಿಕರಾಗುವ ಮಕ್ಕಳಿಗೆ ವಚನಾಧ್ಯಯನದಲ್ಲಿ ಆಸಕ್ತಿ ಹುಟ್ಟಿಸಿ ಸದೃಢ ಸಮಾಜ ಕಟ್ಟಲು ಪಾಲಕರು ಶ್ರಮಿಸಬೇಕೆಂದು ಕರೆ ನೀಡಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಕೋಶಾಧಿಕಾರಿ ಎಸ್.ಆರ್. ರಾಚಣ್ಣವರ, ನವಲಗುಂದ ಶ.ಸಾ.ಪ ಅಧ್ಯಕ್ಷ ಎ.ಬಿ. ಕೊಪ್ಪದ ಮಾತನಾಡಿದರು. ಅಣ್ಣಿಗೇರ ತಾಲೂಕಾಧ್ಯಕ್ಷ ಎನ್.ಎಂ. ಯಲಬುರ್ಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ತಾಲೂಕಾ ಶಸಾಪ ಪದಾಧಿಕಾರಿಗಳಿಗೆ ಜಿಲ್ಲಾಧ್ಯಕ್ಷರಿಂದ ಸೇವಾ ದೀಕ್ಷೆಯ ಪ್ರಮಾಣಪತ್ರ ವಿತರಿಸಲಾಯಿತು. ದತ್ತಿ ದಾನಿ ಶಿವುನಗೌಡ ಪಾಟೀಲ, ಚಂದ್ರಶೇಖರ ಕೊಟ್ಟೂರ ವೇದಿಕೆಯ ಮೇಲೆ ಉಪಸ್ಥಿತರಿದ್ದರು.

ಚಂದ್ರಶೇಖರ ಸುರಕೋಡ ಸ್ವಾಗತಿಸಿದರು. ಡಾ. ಶಾಂತಾ ಲಕ್ಷ್ಮೇಶ್ವರ ವಚನ ಪ್ರಾರ್ಥನೆ ಮಾಡಿ ನಿರೂಪಿಸಿದರು. ವಿಜಯಲಕ್ಷ್ಮೀ ಹರ್ತಿಮಠ ವಚನ ಗಾಯನಗೈದರು. ವೀರಪ್ಪ ಗುದ್ದಿನ ವಂದಿಸಿದರು.

## ಸ್ಪರ್ಶ ನರ್ಸಿಂಗ್ ಕಾಲೇಜಿನಲ್ಲಿ ಮಹಿಳಾ ದಿನಾಚರಣೆ




■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಸ್ಪರ್ಶ ನರ್ಸಿಂಗ್ ಕಾಲೇಜ್‌ನಲ್ಲಿ ವಿಶ್ವ ಮಹಿಳಾ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಧಾರವಾಡದ ಎಸ್.ಡಿ.ಎಂ. ಮೆಡಿಕಲ್ ಕಾಲೇಜಿನ ಅಸಿಸ್ಟೆಂಟ್ ಪ್ರೊಫೆಸರ್ ಡಾ. ರಶ್ಮಿ ಮನಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿ, ಗಂಡು-ಹೆಣ್ಣು ಎನ್ನುವ ಭೇದಭಾವ ಬೇಡ. ಎಲ್ಲಾ ಪೋಷಕರು ಹೆಣ್ಣುಮಕ್ಕಳು ಸಾಧನೆ ಮಾಡುವಲ್ಲಿ ಅವರನ್ನು ಪ್ರೋತ್ಸಾಹಿಸಬೇಕು ಎಂದರು.

ಭಾರತೀಯ ಶಿಕ್ಷಣ ಸಂಸ್ಥೆಯ ಸಂಸ್ಥಾಪಕರಾದ ಪ್ರೊ. ಎಸ್. ವಾಯ್. ಚಿಕ್ಕಟ್ಟಿ, ಜೈನ್ ಎ.ಜಿ.ಎಂ. ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಡಾ. ಅನಿತಾ ಕೆಂಭಾವಿ, ಎಲ್.ವೈ.ಡಿ.ಎಂ. ಸ್ಪರ್ಶ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಅಧ್ಯಕ್ಷರಾದ ಡಾ. ಪ್ರಭಾ ದೇಸಾಯಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದರು.

ಮೇಘಾ ಜೋಗಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಶ್ರೀದೇವಿ ಸ್ವಾಗತಿಸಿದರು. ಚೈತ್ರಾ ಹಾಗೂ ಗೌರಿ ನಿರೂಪಿಸಿದರು. ಲತಾ ರವರು ವಂದಿಸಿದರು. ಈ ಸಂದರ್ಭದಲ್ಲಿ ಶಕುಂತಲಾ ಪಾಟೀಲ, ವಿಶ್ವನಾಥ್ ಪಾಟೀಲ, ಡಾ. ವಿ.ಪಿ. ನಾಗನೂರ, ಪ್ರಾಚಾರ್ಯರಾದ ಡಿ.ಬಿ. ಮಧುಸೂದನ್, ಆಡಳಿತಾಧಿಕಾರಿ ರಂಗನಾಥ ಎಂ.ವಿ ಸೇರಿದಂತೆ ಸ್ಪರ್ಶ ನರ್ಸಿಂಗ್ ಕಾಲೇಜಿನ ಉಪನ್ಯಾಸಕರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

## ಯು.ಜಿ.ಡಿ., ರಸ್ತೆ ನಿರ್ಮಿಸಲು ಸಚಿವರಿಗೆ ಮನವಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ವಾರ್ಡ್ ನಂ. 6, 1ನೇ ಭಾಗ, ಸಿಟಿ ಸರ್ವೆ ನಂ. 6614ರಲ್ಲಿ ಯು.ಜಿ.ಡಿ. ಹಾಗೂ ರಸ್ತೆ ನಿರ್ಮಾಣ ಮಾಡುವಂತೆ ಸಾರ್ವಜನಿಕರು ಸಚಿವ ಎಚ್.ಕೆ. ಪಾಟೀಲರಿಗೆ ಮನವಿ ಸಲ್ಲಿಸಿ ವಿನಂತಿಸಿಕೊಂಡರು.

ಈ ಸಂಬಂಧ ಜನತಾ ದರ್ಶನದ ಕಾರ್ಯಕ್ರಮದಲ್ಲಿ ಅರ್ಜಿ ಸಲ್ಲಿಸಿದರೂ ಯಾವುದೇ ಪ್ರಯೋಜನವಾಗಿಲ್ಲ.

ಈ ಜಾಗೆಯಲ್ಲಿ ಒಂದು ತರಹದ ಕೊಳಚೆ ಪ್ರದೇಶ ಜಾಗೆಯಾಗಿದ್ದು ಜಾಲಿಕಂಟಿ ಬಹಳ ಬೆಳೆದು ಹಂದಿ, ನಾಯಿಗಳು ವಾಸ ಮಾಡುತ್ತಿವೆ. ಇದರಿಂದ ಸಾರ್ವಜನಿಕರಿಗೆ ತೊಂದರೆಯಾಗಿದೆ.

ಇಲ್ಲಿ ಚರಂಡಿ ನೀರು ಹರಿದುಹೋಗಲು ಸೂಕ್ತ



ವ್ಯವಸ್ಥೆಯಿಲ್ಲದೆ ಅನಾರೋಗ್ಯಕ್ಕೆ ದಾರಿ ಮಾಡಿಕೊಡುತ್ತಿದೆ. ರಸ್ತೆ ನಿರ್ಮಾಣ ಹಾಗೂ ಗಟಾರು ನಿರ್ಮಾಣ ಮಾಡಿ ಎಲ್ಲಿಯೂ ಕೊಳಚೆ ನೀರು ನಿಲ್ಲದ ಹಾಗೆ ಕ್ರಮ ಜರುಗಿಸಬೇಕೆಂದು ಸಾರ್ವಜನಿಕರು ವಿನಂತಿಸಿಕೊಂಡರು. ಈ ಸಂದರ್ಭದಲ್ಲಿ ಚನ್ನಬಸಯ್ಯ ಕಲಹಾಳಮಠ, ಎ.ಬಿ. ರಜಪೂತ, ಚೇತು ಮೀರಜಕರ, ಫಾಯಿಮ್ ಚಕಾರಿ, ಲಿಂಗಯ್ಯ ಹಿರೇಮಠ, ಫಾಯಜ್ ಅಹ್ಮದ ಚಕಾರಿ, ಅನುಪಮಾ ಹುಗ್ಗಿ, ಶ್ವೇತಾ ಹುಗ್ಗಿ, ಎಸ್.ಬಿ. ಹಡಪದ, ಎಚ್.ಎಚ್. ನದಾಫ್, ಪರಶುರಾಮ ಜೋಗಣ್ಣವರ, ಅಂಬುಬಾಯಿ ಶಿದ್ಲಿಂಗ, ಬಾಪುಸಿಂಗ ರಜಪೂತ, ಲಾಲಸಾಬ ಕರಾಚಿ, ರಾಧಿಕಾ ಶಿದ್ಲಿಂಗ, ಮಂಜುನಾಥ ಶಿದ್ಲಿಂಗ ಮುಂತಾದವರಿದ್ದರು.

# ಹೋಳಿ ಹಬ್ಬವನ್ನು ಶಾಂತಿಯುತವಾಗಿ ಆಚರಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಬಣ್ಣಗಳ ಹಬ್ಬ ಹೋಳಿಯನ್ನು ಶಾಂತಿಯುತವಾಗಿ ಆಚರಿಸಿ. ಎಲ್ಲಿಯೂ ಯಾವುದೇ ಅಹಿತಕರ ಘಟನೆ ನಡೆಯದಂತೆ ನೋಡಿಕೊಳ್ಳುವುದು ಎಲ್ಲರ ಜವಾಬ್ದಾರಿಯಾಗಿದೆ. ಯುವಕರು ಏನಾದರೂ ಪುಂಡಾಟಿಕೆ ತೋರಿದರೆ ಅಂಥವರ ಮೇಲೆ ಸೂಕ್ತ ಕ್ರಮ ಜರುಗಿಸಲಾಗುವುದೆಂದು ರೋಣ ಸಿಪಿಐ ಎಸ್.ಎಸ್. ಬೀಳಗಿ ಹೇಳಿದರು.

ಪಟ್ಟಣದ ಪೊಲೀಸ್ ಠಾಣೆಯಲ್ಲಿ ನಡೆದ ಹೋಳಿ ಶಾಂತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ನಿಮ್ಮ ಸ್ನೇಹಿತರಿಗೆ, ಸಂಬಂಧಿಕರಿಗೆ, ಆತ್ಮೀಯರಿಗೆ



ಬಣ್ಣ ಎರಚಿ ಸಂತೋಷಪಡಿ. ಅನಾವಶ್ಯಕವಾಗಿ ಅಪರಿಚಿತರಿಗೆ, ಸರಕಾರಿ ಆಸ್ತಿಗೆ ಏನಾದರೂ ಹಾನಿ ಮಾಡಲು ಮುಂದಾದರೆ ಕಠಿಣ ಶಿಕ್ಷೆ ಕಟ್ಟಿಟ್ಟ ಬುತ್ತಿ. ಈ ವಿಷಯವನ್ನು ಇಂದಿನ ಈ ಶಾಂತಿ ಸಭೆಗೆ ಬಂದಿರುವ ಹಿರಿಯರು ನಿಮ್ಮ ಓಣಿಯಲ್ಲಿನ ಯುವಕರಿಗೆ ತಿಳಿಸಿ ಎಂದರು.

ಪಿಎಸ್‌ಐ ಐಶ್ವರ್ಯ ನಾಗರಾಳ ಮಾತನಾಡಿ, ಹೋಳಿ ಹಬ್ಬದಲ್ಲಷ್ಟೇ ಅಲ್ಲದೆ ನಿತ್ಯದ ದಿನಗಳಲ್ಲಿಯೂ ನರೇಗಲ್ಲ ಪಟ್ಟಣದಲ್ಲಿ ಶಾಂತಿ - ಸುವ್ಯವಸ್ಥೆಗಾಗಿ ಅನೇಕ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಇನ್ನು ಮುಂದೆ ಯುವಕರು ಬೈಕ್‌ನಲ್ಲಿ ಟ್ರಿಬಲ್ ರೈಡಿಂಗ್ ಹೋದರೆ, ಶಾಲೆ-ಕಾಲೇಜು ಬಿಡುವ ಸಮಯದಲ್ಲಿ ಹುಡುಗಿಯರನ್ನು ಚುಡಾಯಿಸಲು ಮುಂದಾದರೆ ಅಂಥವರನ್ನು ಮುಲಾಜಿಲ್ಲದೆ ಶಿಕ್ಷೆಗೆ ಒಳಪಡಿಸಲಾಗುವುದು. ಆದ್ದರಿಂದ ವಾಹನ ಸವಾರರು ಎಚ್ಚರಿಕೆಯಿಂದ ಇರಬೇಕೆಂದರು.

ಸಭೆಯನ್ನುದ್ದೇಶಿಸಿ ಅರುಣ ಕುಲಕರ್ಣಿ, ಮೈಲಾರಪ್ಪ ಚಳ್ಳಮರದ, ಚಂದ್ರು ರಾಠೋಡ ಮತ್ತು ಹನುಮಂತಪ್ಪ ದ್ವಾಸಲ ಮಾತನಾಡಿದರು.ಸಭೆಯಲ್ಲಿ ಶೇಖಪ್ಪ ಜುಟ್ಲ, ಯಲ್ಲಪ್ಪ ಮಣ್ಣೊಡ್ಡರ, ಎಂ.ಎಸ್. ಖೇತಗಿ, ಕೆ.ಎಂ. ಸಂಗನಾಳ, ಬಸಪ್ಪ ಗೋಡಿ, ಮಾರುತಿ ಜುಟ್ಲ, ಎಂ.ಬಿ. ಭೂಮನಗೌಡ್ರ, ರಂಗಪ್ಪ ನಾಯ್ಕರ, ಐ.ಐ. ಬಿಸನಳ್ಳಿ, ಯು.ಬಿ. ಕೊತಬಾಳ, ಎಚ್.ಬಿ. ಚಲವಾದಿ, ಮುಕ್ಕಣ್ಣವರ, ಎಂ.ಕೆ. ಗುಂಡಗೋಪುರಮಠ ಮತ್ತಿತರರು ಪಾಲ್ಗೊಂಡಿದ್ದರು. ಆರಕ್ಷಕ ಸಿಬ್ಬಂದಿ ಉಪ್ಪಾರ ನಿರ್ವಹಿಸಿದರು.

### 'ಜೈವಿಕ ಮಾದರಿಗಳ ಸಂರಕ್ಷಣೆ, ಅವುಗಳನ್ನು ಸರಿಪಡಿಸುವುದು' ವಿಷಯವಾಗಿ ಕಾರ್ಯಾಗಾರ

# ಟ್ಯಾಕ್ಸಿಡರ್ಮಿ ಕಲಿಯಲು ತಾಳ್ಮೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಗದಗ

ಟ್ಯಾಕ್ಸಿಡರ್ಮಿ ಸತ್ತ ಪ್ರಾಣಿಗಳಿಗೆ ಮರುಜೀವ ಕೊಡುವ ಕಲೆಯಾಗಿದ್ದು, ಈ ಕಲೆಯನ್ನು ಕಲಿಯಲು ವಿದ್ಯಾರ್ಥಿಗಳಲ್ಲಿ ತಾಳ್ಮೆ ಬೇಕು ಎಂದು ಧಾರವಾಡದ ಕರ್ನಾಟಕ ವಿಜ್ಞಾನ ಮಹಾವಿದ್ಯಾಲಯ ಪ್ರಾಣಿಶಾಸ್ತ್ರ ವಿಭಾಗದ ಪ್ರಾಣಿಶಾಸ್ತ್ರ ವಸ್ತುಸಂಗ್ರಹಾಲಯದ ಟ್ಯಾಕ್ಸಿಡರ್ಮಿಸ್ಟ್ ನವೀನ ಪ್ಯಾಟಿಮನಿ ತಿಳಿಸಿದರು.

ಇಲ್ಲಿನ ಕೆಎಲ್‌ಇ ಸಂಸ್ಥೆಯ ಜಗದ್ಗುರು ತೋಂಟದಾರ್ಯ ಮಹಾವಿದ್ಯಾಲಯದ ಪ್ರಾಣಿಶಾಸ್ತ್ರ ವಿಭಾಗದಲ್ಲಿ 'ಜೈವಿಕ ಮಾದರಿಗಳ ಸಂರಕ್ಷಣೆ ಮತ್ತು ಅವುಗಳನ್ನು ಸರಿಪಡಿಸುವುದು' ವಿಷಯವಾಗಿ ಹಮ್ಮಿಕೊಂಡಿದ್ದ ಒಂದು ದಿನದ ಕಾರ್ಯಾಗಾರದಲ್ಲಿ ಸಂಪನ್ಮೂಲ ವ್ಯಕ್ತಿಯಾಗಿ ಪಾಲ್ಗೊಂಡು ಅವರು ಮಾತನಾಡಿದರು.

ಪ್ರಾಚಾರ್ಯರಾದ ಪಿ.ಜಿ. ಪಾಟೀಲ ಮಾತನಾಡಿ, ಮೊದಲಿನ ಕಾಲದಲ್ಲಿ ಹಸುಗಳು ತಮ್ಮ ಕರುಗಳು ಸತ್ತಾಗ ಹಾಲು ಕೊಡುತ್ತಿರಲ್ಲಿಲ್ಲ. ಆ ಸಮಯದಲ್ಲಿ ಟ್ಯಾಕ್ಸಿಡರ್ಮಿ ಕಲೆಯ ಮುಖಾಂತರ



ಕರುಗಳನ್ನು ಸಂರಕ್ಷಿಸಿ, ಹಸುಗಳ ಮುಂದೆ ಇಟ್ಟಾಗ ಅವು ಹಾಲು ಕೊಡುತ್ತಿದ್ದವು. ಸತ್ತ ಶವಗಳನ್ನು ಪಿರ್ಯಾಮಿಡಗಳಲ್ಲಿ ಸಂರಕ್ಷಿಸಿ ಇಡುತ್ತಿದ್ದರು. ಹಾಗಾಗಿ ಈ ಟ್ಯಾಕ್ಸಿಡರ್ಮಿ ಕಲೆಯು ಬಹಳ ವಿಶಿಷ್ಟವಾಗಿದ್ದು, ಈ ಕಲೆಯ ಮುಖಾಂತರ ಸಹಜವಾಗಿ ಸತ್ತ ಪ್ರಾಣಿಗಳನ್ನು ಮುಂದಿನ ಪೀಳಿಗೆಗೆ ಸಂರಕ್ಷಿಸಿ ಇಡಬಹುದು. ವಿದ್ಯಾರ್ಥಿಗಳು ಈ ವೈಜ್ಞಾನಿಕ ಕೌಶಲ್ಯ ವಾದ ಟ್ಯಾಕ್ಸಿಡರ್ಮಿ ಕಲೆಯನ್ನು ಕಲಿತು ನಿಮ್ಮ ಜೀವನದಲ್ಲಿ ಅಳವಡಿಸಿಕೊಂಡು, ಸಹಜವಾಗಿ ಸತ್ತ ಪ್ರಾಣಿಗಳನ್ನು ಅರಣ್ಯ ಇಲಾಖೆಯ ಅನುಮತಿ ತೆಗೆದುಕೊಂಡು ಸಂರಕ್ಷಿಸಿ ಇಡಬೇಕೆಂದು ಹೇಳಿದರು.

ಕಾರ್ಯಾಗಾರದಲ್ಲಿ ಟ್ಯಾಕ್ಸಿಡರ್ಮಿಸ್ಟ್ ನವೀನ ಪ್ಯಾಟಿಮನಿ ಸಹಜವಾಗಿ ಸತ್ತ ಮೀನನ್ನು ಸಂರಕ್ಷಿಸುವುದು ಹೇಗೆ ಎಂದು ಪ್ರಾತ್ಯಕ್ಷಿಕೆಯ ಮೂಲಕ ತಿಳಿಸಿಕೊಟ್ಟರು. ಈ ಸಂದರ್ಭದಲ್ಲಿ ಆಯ್.ಕ್ಯೂ.ಎ.ಸಿಯ ಸಂಯೋಜಕರಾದ ಡಾ. ರಮೇಶ ಜಿ.ಕೆ, ಪ್ರಾಣಿಶಾಸ್ತ್ರ ವಿಭಾಗದ ಮುಖ್ಯಸ್ಥರಾದ ವೀಣಾ ಎಮ್.ಎನ್, ಉಪನ್ಯಾಸಕರಾದ ಕಿರಣಕುಮಾರ, ಮಲ್ಲಪ್ಪಾ, ವಿದ್ಯಾ ಸೇರಿದಂತೆ ಶಿಕ್ಷಕ-ಶಿಕ್ಷಕೇತರ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹಾಜರಿದ್ದರು.

ಜೀವನದಲ್ಲಿ ಏನಾದರೂ ಮಾಡಬೇಕೆಂದರೆ ಮತ್ತು ಯಾವುದೇ ಕೌಶಲ್ಯವನ್ನು ಕಲಿಯಬೇಕೆಂದರೆ ತಾಳ್ಮೆ ಬಹಳ ಮುಖ್ಯ. ಅಂತೆಯೇ ಟ್ಯಾಕ್ಸಿಡರ್ಮಿ (Taxidermy) ಕಲೆಯು ಸತ್ತ ಪ್ರಾಣಿಗಳಿಗೆ ಮರುಜೀವ ಕೊಡುವ ಕಲೆಯಾಗಿದ್ದು, ಈ ಟ್ಯಾಕ್ಸಿಡರ್ಮಿ ಕಲೆಯ ಮುಖಾಂತರ ಸತ್ತ ಪ್ರಾಣಿಗಳನ್ನು ರಾಸಾಯನಿಕ ಉಪಯೋಗಿಸಿ ಸುಮಾರು 100ರಿಂದ 200 ವರ್ಷಗಳ ಕಾಲ ಸಂರಕ್ಷಿಸಿ ಮುಂದಿನ ಪೀಳಿಗೆಗೆ ಅಭ್ಯಸಿಸಲು ಹಾಗೂ ಶಿಕ್ಷಣ ಮತ್ತು ಸಂಶೋಧನಾ ಸಂಸ್ಥೆಗಳಲ್ಲಿ ಇಡಬಹುದು. ಈ ಟ್ಯಾಕ್ಸಿಡರ್ಮಿ ಕಲೆಯನ್ನು ಕಲಿಯಬೇಕೆಂದರೆ ನಿಮ್ಮಲ್ಲಿ ತಾಳ್ಮೆ ಬಹಳ ಮುಖ್ಯ ಎಂದು ನವೀನ ಪ್ಯಾಟಿಮನಿ ತಿಳಿಸಿದರು.

## ಹಿಂದೂ ದೇವರುಗಳಿಗೆ ಮುಸ್ಲಿಮರು ನಿರ್ಮಿತ ಉಡುಪುಗಳ ನಿಷೇಧಕ್ಕೆ ಹಿಂದೂ ನಾಯಕರ ಆಗ್ರಹ

■ವಿಜಯಸಾಕ್ಷಿ ಸುದ್ದಿ, ವೃಂದಾವನ

ಠಾಕೂರ್ ಬಂಕೆ ಬಿಹಾರಿ ಎಂದು ಪೂಜಿಸಲ್ಪಡುವ ಹಿಂದೂ ದೇವರಾದ ಶ್ರೀಕೃಷ್ಣನ ಉಡುಪು ಮತ್ತು ಆಭರಣಗಳನ್ನು ತಯಾರಿಸುವಲ್ಲಿ ಮುಸ್ಲಿಂ ಕುಶಲಕರ್ಮಿಗಳ ಪಾತ್ರದ ಬಗ್ಗೆ ವಿವಾದಾತ್ಮಕ ಚರ್ಚೆ ಆರಂಭವಾಗಿದೆ.

ಹಿಂದೂ ನಾಯಕ ದಿನೇಶ್ ಶರ್ಮಾ ಫಲಹರಿ ನೇತೃತ್ವದ ಉತ್ತರಪ್ರದೇಶದ ಮಥುರಾ ಜಿಲ್ಲೆಯ ವೃಂದಾವನ ಪಟ್ಟಣದಲ್ಲಿ ನಡೆದ ವಿವಾದವು ಕೋಮು ತಿರುವು ಪಡೆದುಕೊಂಡಿದ್ದು, ಈ ಪಟ್ಟಣವು ಮುಸ್ಲಿಮರಿಗೆ ಯಾವುದೇ ಧಾರ್ಮಿಕ ಮಹತ್ವವನ್ನು ಹೊಂದಿಲ್ಲ ಮತ್ತು ದೇವತೆಯ ಉಡುಪುಗಳನ್ನು ತಯಾರಿಸುವಲ್ಲಿ ಅವರ ಪಾಲ್ಗೊಳ್ಳುವಿಕೆ ಸೂಕ್ತವಲ್ಲ ಎಂಬ ಹೇಳಿಕೆಗಳೊಂದಿಗೆ ವಿವಾದ ಉಂಟಾಗಿದೆ.

ಮಥುರಾ ಕೃಷ್ಣ ಜನ್ಮಭೂಮಿ ಪ್ರಕರಣದಲ್ಲಿ ಪ್ರಮುಖ ಅರ್ಜಿದಾರರಾದ ಫಲಹರಿ, ಬಂಕೆ ಬಿಹಾರಿ ದೇವಾಲಯದ ಪುರೋಹಿತರು ಮತ್ತು ಸೇವಕರಿಗೆ ಜ್ಞಾಪಕ ಪತ್ರವನ್ನು ಸಲ್ಲಿಸಿ, ಮುಸ್ಲಿಂ ಕುಶಲಕರ್ಮಿಗಳು ತಯಾರಿಸಿದ ಉಡುಪುಗಳನ್ನು ಬಳಸುವುದನ್ನು ನಿಲ್ಲಿಸುವಂತೆ ಒತ್ತಾಯಿಸಿದ್ದಾರೆ.

"ವೃಂದಾವನವು ಹಿಂದೂಗಳಿಗೆ ಪವಿತ್ರ ಸ್ಥಳವಾಗಿದೆ, ಮುಸ್ಲಿಮರಿಗಲ್ಲ. ಕೃಷ್ಣನ ಬಟ್ಟೆ ಮತ್ತು ಆಭರಣಗಳನ್ನು ಹಿಂದೂ ಕುಶಲಕರ್ಮಿಗಳು ಮಾತ್ರ ತಯಾರಿಸಬೇಕು. ಅವುಗಳನ್ನು ಪೂಜಿಸದವರು ತಯಾರಿಸಿದ ಉಡುಪುಗಳನ್ನು ಧರಿಸುವುದು ಸ್ವೀಕಾರಾರ್ಹವಲ್ಲ" ಎಂದು ಫಲಹಾರಿ ಪ್ರತಿಪಾದಿಸಿದರು.

# ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್-13 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 4 ಹುಯಿಲಗೋಳ ಬಲಭಾಗ ಪೂರ್ತಿ, ಟರ್ನಲ್ ಪೇಟೆ, ಮಾಜಿ ಮೆಂಬರ್ ಲೈನ್, ಗೌರಿಗುಡಿ, ಬಾಳಿಕಾಯಿ ಅವರ ಲೈನ್, ಕರಿಬಿಷ್ಟಿಯವರ ಲೈನ್, ಮಂಜುನಾಥ ನಗರ ಬಿ.ಎಸ್.ಎನ್.ಎಲ್. ಆಫೀಸ್, 200 ಮನೆ ಲೈನ್, 270 ಮನೆ ಲೈನ್, ಕಣವಿ ಪ್ಲಾಟ್, ಉಳಿದ ಕೆಲವು ಭಾಗಗಳು, ವಾರ್ಡ್ ನಂ. 12,13 ರಲ್ಲಿ ಆನಂದ ಕಾರ್ಕಳ ಲೈನ್, ಜೆ.ಟಿ, ಕಾಲೇಜು ರಸ್ತೆ, ಗಣಪತಿ ಗುಡಿ, ಅಗಸರ ಲೈನ್, ಜಾಧವ್, ಮಾಲೀಪಾಟೀಲ ಲೈನ್, ಮುಧೋಳ ವಕೀಲರ ಲೈನ್, ಟೋಪಿಯವರ ಲೈನ್, ಗೋಳಬಾಳ ಪ್ಲಾಟ್, ಗೋಟೂರ ಅವರ ಲೈನ್, ಅಂಗಡಿಯವರ ಲೈನ್, ಉಳಿದ ಭಾಗಗಳು,

ವಾರ್ಡ್ ನಂ. 7ರಲ್ಲಿ ಪುಲಿಕೇಶಿ ರಸ್ತೆ, ಬಾರಕೇರ, ಕಿಲ್ಲಾ ಓಣಿ, ಬಾಗಲಕೋಟಿಯವರ ಹಳೇ ಪೋಸ್ಟ್ ಆಫೀಸ್, ಪಟ್ಟಣಶೆಟ್ಟರ್, ಹುಚ್ಚನಗೌಡ್ರ ಓಣಿ, ವಾಲ್ಮೀಕಿ ನಗರ ಗ್ವಾಡಿಯವರ ಲೈನ್, ಕೆಲವು ಉಳಿದ ಭಾಗಗಳು, ವಾರ್ಡ್ ನಂ.22 ಗಂಗಿಮಡಿ ಲಿಡ್ಕರ್ ಬಡಾವಣೆ, ಕನ್ನಡ ಶಾಲೆ, ವಾರ್ಡ್ ನಂ 7, ಶಿವಾಜಿ ನಗರ ಪೂರ್ತಿ ಭಾಗಗಳು, ವಾರ್ಡ್ ನಂ. 23, 21, ಕೆರಕಲಮಟ್ಟಿ, ಪಲ್ಲೇದ ಅವರ ಓಣಿ, ಕಲ್ಲಬಂಡಿಯವರ ಲೈನ್, ಸೋಮೇಶ್ವರ ಗುಡಿ, ಹಾಳದಿಬ್ಬ, ಸಿ.ಟಿ. ಹಾಲ್, 2 ಭಾಗಗಳು, ಜಂತ್ಲಿ, ಕುಂಬಾರ, ಉಸಗಿನಗಟ್ಟಿ, ಪಡಗದ ಲೈನ್ 2 ಭಾಗಗಳು, ಉಳಿದ ಕೆಲವು ಭಾಗಗಳು,

ವಾರ್ಡ್ ನಂ. 14, 13, ಟ್ಯಾಗೋರ್ ರಸ್ತೆ, ಹಣಗಿ ಜೀನ್, ಕುರಡಗಿಯವರ ಲೈನ್, ಕೊಣ್ಣೂರ ಅವರ ಲೈನ್, ನಿಡಗುಂದಿ ಅವರ ಲೈನ್, ಕಟ್ಟಿಮನಿಯವರ ಲೈನ್, ವಿ.ಡಿ.ಎಸ್.ಟಿ. ಶಾಲೆ, ಪಂಪ್ ಹೌಸ್ ಲೈನ್, ಹಾದಿಮನಿಯವರ ಲೈನ್, ಮಟ್ಟಿಯವರ ಲೈನ್, ಸೋನಿಯವರ ಲೈನ್, ವಿಜಯ ಶೆಟ್ಟರ ಲೈನ್, ಪೊಲೀಸ್ ಕ್ವಾರ್ಟರ್ಸ್ ಲೈನ್, ಪತ್ತೆಪೂರ ಲೈನ್, ವಕೀಲರ ಚಾಳ, ಗೋಮ್ಸ್ ಬಿಲ್ಡಿಂಗ್ ಲೈನ್, ಸಂಕಣ್ಣವರ ಸರ್ ಲೈನ್, ಹೆಡ್‌ಪೋಸ್ಟ್ ಲೈನ್, ಕಾರಂತ ಅವರ ಲೈನ್, ಕೆಲವು ಉಳಿದ ಭಾಗಗಳು.

ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ. ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿರುತ್ತಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಹಿಳಾ ಗೃಹ ಉದ್ಯೋಗ ಲಿಜ್ಜತ್ ಪಾಪಡ್‌ನ 84ನೇ ಶಾಖೆ ಉದ್ಘಾಟಿಸಿದ ಸಚಿವ ಎಚ್.ಕೆ. ಪಾಟೀಲ

# ಮಹಿಳಾ ಸಬಲೀಕರಣದ ದಿಟ್ಟ ಹೆಜ್ಜೆ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳೆಯರೇ ಸ್ಥಾಪಿಸಿದ ಗೃಹೋದ್ಯಮ ಲಿಜ್ಜತ್ ಪಾಪಡ್ ಮಹಿಳೆಯರ ಸಬಲೀಕರಣದಲ್ಲಿ ಎಲ್ಲರಿಗಿಂತಲೂ ಒಂದು ಹೆಜ್ಜೆ ಮುಂದಿದೆ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ನಗರದ ಗುಜ್ಜರ ಬಸ್ತಿಯ ಕೆಡಿಓ ಜೈನ್ ಹಾಲ್‌ನಲ್ಲಿ ಬುಧವಾರ ಖಾದಿ ಮತ್ತು ಗ್ರಾಮ ಕೈಗಾರಿಕಾ ಆಯೋಗದಿಂದ ಗುರುತಿಸಲ್ಪಟ್ಟಿರುವ ಮಹಿಳಾ ಗೃಹ ಉದ್ಯೋಗ ಲಿಜ್ಜತ್ ಪಾಪಡ್‌ನ 84ನೇ ಶಾಖೆ ಉದ್ಘಾಟಿಸಿ ಅವರು ಮಾತನಾಡಿದರು.

ಲಿಜ್ಜತ್‌ನ್ನು ಶುರು ಮಾಡಿದ್ದು ಮುಂಬೈನ ಏಳು ಗುಜರಾತಿ ಮಹಿಳೆಯರು. ಅಡುಗೆ ಬಗ್ಗೆ ಆಸಕ್ತಿ ಹೊಂದಿದ್ದ ಒಂದಿಷ್ಟು ಗೃಹಿಣಿಯರ ಸ್ವಾವಲಂಬಿ ಜೀವನ ನಡೆಸುವ ಹಂಬಲದ ಪರಿಣಾಮವಾಗಿ ರೂಪುಗೊಂಡಿದ್ದು ಈ ಲಿಜ್ಜತ್ ಪಾಪಡ್. ಕೇವಲ 80 ರೂಪಾಯಿಂದ ಪ್ರಾರಂಭವಾದ ಈ ಹಪ್ಪಳದ ಉದ್ಯಮ ಇಂದು ಸಾವಿರ ಕೋಟಿ ರೂ.ಗೂ ಅಧಿಕ ವಹಿವಾಟು ನಡೆಸುತ್ತಿದೆ. 45 ಸಾವಿರಕ್ಕೂ ಹೆಚ್ಚು ಮಹಿಳೆಯರು ಕೆಲಸ ನಿರ್ವಹಿಸುತ್ತಿದ್ದಾರೆ. ಇದೊಂದು ಮಹಿಳಾ ಸ್ವ-ಉದ್ಯೋಗ ಸಂಸ್ಥೆಯಾಗಿದ್ದು, ಇಲ್ಲಿ ಹೆಚ್ಚಾಗಿ ಮಹಿಳೆಯರು ಕಾರ್ಯನಿರ್ವಹಿಸುತ್ತಾರೆ. ಮಹಿಳೆಯರಿಗೆ ಉದ್ಯೋಗಾವಕಾಶ ನೀಡುವುದು



ಮತ್ತು ಮಹಿಳೆಯರನ್ನು ಸಬಲೀಕರಣ ಮಾಡುವುದು ಈ ಸಂಸ್ಥೆಯ ಮುಖ್ಯ ಉದ್ದೇಶವಾಗಿದೆ ಎಂದರು.

ಮಾಜಿ ಶಾಸಕ ಡಿ.ಆರ್. ಪಾಟೀಲ ಮಾತನಾಡಿ, ಮಹಿಳಾ ಗೃಹ ಉದ್ಯೋಗ ಲಿಜ್ಜತ್ ಪಾಪಡ್‌ನ 84ನೇ ಶಾಖೆ ಆರಂಭಕ್ಕೂ ಸಚಿವ ಎಚ್.ಕೆ. ಪಾಟೀಲರಿಗೂ ಅವಿನಾಭಾವ ಸಂಬಂಧವಿದೆ. ಎಚ್.ಕೆ. ಪಾಟೀಲರು ವಿಧಾನ ಪರಿಷತ್ ಸದಸ್ಯರಾಗಿ ಮೊದಲ ಬಾರಿ ಆಯ್ಕೆಯಾಗಿ ಸಾರ್ವಜನಿಕ ಬದುಕು ಆರಂಭಿಸಿದ್ದು 1984ರಲ್ಲಿ. 84 ಅದೃಷ್ಟದ ಸಂಖ್ಯೆಯಾಗಿದ್ದು, ಯಶಸ್ವಿಯಾಗಿ ಕಾರ್ಯ ನಿರ್ವಹಿಸುತ್ತದೆ ಎಂಬ ಸಂಪೂರ್ಣ ನಂಬಿಕೆಯಿದೆ ಎಂದರು.

ಮಹಿಳಾ ಗೃಹ ಉದ್ಯೋಗ ಲಿಜ್ಜತ್ ಪಾಪಡ್‌ನ ಅಧ್ಯಕ್ಷೆ ಸ್ವಾತಿ ಪರಾಡಕರ್ ಅಧ್ಯಕ್ಷತೆ ವಹಿಸಿ ಸಂಸ್ಥೆಯ ಧ್ಯೇಯೊದ್ದೇಶ ಹಾಗೂ ತತ್ವ ಸಿದ್ಧಾಂತಗಳನ್ನು ವಿವರಿಸಿದರು. ಉಪಾಧ್ಯಕ್ಷೆ ಪ್ರತಿಭಾ ಸಾವಂತ, ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಪಾಟೀಲ, ಗದಗ ತಾಲೂಕು ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಗದಗ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಜಿ.ಪಂ ಮಾಜಿ ಅಧ್ಯಕ್ಷ ಸಿದ್ದು ಪಾಟೀಲ, ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ನೀಲಮ್ಮ ಬೋಳನವರ, ಗುರಣ್ಣ ಬಳಗಾನೂರ ಸೇರಿದಂತೆ ಮಹಿಳಾ ಸದಸ್ಯರು ಇದ್ದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಪ್ರಭು ಬುರಬುರೆ ಪ್ರಾಸ್ತಾವಿಕವಾಗಿ ಮಾತನಾಡಿ, ಕಾರ್ಯಕ್ರಮ ನಿರೂಪಿಸಿ, ವಂದಿಸಿದರು.

> ಗದುಗಿನಲ್ಲಿ ಈಗಾಗಲೇ 382 ಮಹಿಳೆಯರು ನೋಂದಣಿ ಮಾಡಿಕೊಂಡಿದ್ದು, 172 ಮಹಿಳೆಯರು ಕೆಲಸ ಆರಂಭಿಸಿದ್ದಾರೆ. 150ಕ್ಕೂ ಹೆಚ್ಚು ಮಹಿಳೆಯರು ತರಬೇತಿ ಪಡೆಯುತ್ತಿದ್ದಾರೆ. ಗದುಗಿನ ಮಹಿಳೆಯರು ಈಗಾಗಲೇ 220, 170, 150 ಕೆಜಿ ಪಾಪಡ್ ತಯಾರಿಸುತ್ತಿದ್ದಾರೆ. ಹೀಗಾಗಿ ಮುಂದಿನ ದಿನಗಳಲ್ಲಿ ಜಿಲ್ಲೆಯ ಮಹಿಳೆಯರು ರಾಜ್ಯದಲ್ಲಿ ನಂ.1 ಸ್ಥಾನದಲ್ಲಿ ಪಾಪಡ್ ತಯಾರಿಸಬೇಕು. ಹಾಗೆಯೇ ಸಾವಿರಾರು ಮಹಿಳೆಯರಿಗೆ ಉದ್ಯೋಗ ನೀಡುವ ಕೆಲಸವನ್ನು ಮಾಡಬೇಕು.
>
> **– ಎಚ್.ಕೆ. ಪಾಟೀಲ.**
> **ಜಿಲ್ಲಾ ಉಸ್ತುವಾರಿ ಸಚಿವರು.**

# ರೇಣುಕಾಚಾರ್ಯರ ತತ್ವ-ಸಿದ್ಧಾಂತಗಳನ್ನು ಪಾಲಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ವೀರಶೈವ ಧರ್ಮ ಸಂಸ್ಥಾಪಕರು ಮತ್ತು ಮಾನವಧರ್ಮ ಉದ್ಧಾರಕ್ಕಾಗಿ ಅವತಾರವೆತ್ತಿದ ಜ.ಶ್ರೀ ರೇಣುಕಾಚಾರ್ಯರ ತತ್ವ-ಸಿದ್ಧಾಂತಗಳನ್ನು ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಮುಖ್ಯ ಶಿಕ್ಷಕಿ ಎನ್.ವಿ. ಕುಲಕರ್ಣಿ ಹೇಳಿದರು.

ಶಿಗ್ಲಿಯ ಸರಕಾರಿ ಮಾದರಿ ಪ್ರಾಥಮಿಕ ಶಾಲೆಯಲ್ಲಿ ಜ.ಶ್ರೀ



ರೇಣುಕಾಚಾರ್ಯ ಜಯಂತಿ ಆಚರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಜಗದ್ಗುರು ಶ್ರೀ ರೇಣುಕಾಚಾರ್ಯರು ಸಿದ್ಧಾಂತ ಶಿಖಾಮಣಿಯಂತಹ ಮಹಾನ್ ಗ್ರಂಥದ ಮೂಲಕ ಸಾಮರಸ್ಯ, ಸಹಬಾಳ್ವೆ, ಸೌಹಾರ್ದತೆಯ ಬದುಕನ್ನು ಬೋಧಿಸಿದ್ದಾರೆ ಎಂದರು.

ಧರ್ಮಾಭಿಮಾನಿ ವೀರಣ್ಣ ಪವಾಡದ ಮಾತನಾಡಿ, ದೇವರ ಸ್ವರೂಪಿಯಾದ ಜಗದ್ಗುರು ರೇಣುಕಾಚಾರ್ಯರ ತತ್ವ-ಸಿದ್ಧಾಂತಗಳನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಶ್ರೀ ಜ.ರೇಣುಕಾಚಾರ್ಯರು ಜಗತ್ತಿನ ಧಾರ್ಮಿಕ ಇತಿಹಾಸದಲ್ಲಿ ಅಪರೂಪದ ಧರ್ಮಸಿದ್ಧಾಂತ ಬೋಧಿಸಿ ಮನುಕುಲವನ್ನು ಉದ್ಧರಿಸಿದ್ದಾರೆ. ಅಹಿಂಸೆ, ಸತ್ಯ, ಕಳ್ಳತನ ಮಾಡದಿರುವುದು, ಬ್ರಹ್ಮಚರ್ಯ, ದಯೆ, ಕರುಣೆ, ದಾನ, ಶಿವಪೂಜೆ, ಪಂಚಾಕ್ಷರೀ ಮಂತ್ರಜಪ, ಶಿವಧ್ಯಾನ ಈ ಧರ್ಮಾಚರಣೆಯ ರಹಸೂತ್ರಗಳನ್ನು ತಿಳಿಸಿ ಮಾನವ ಕುಲದ ಬೆಳಕಾಗಿದ್ದಾರೆ. ಮನುಷ್ಯರಾದ ನಾವೆಲ್ಲರೂ ಜ.ರೇಣುಕಾಚಾರ್ಯರ ಸ್ಮರಣೆ ಮಾಡುವುದು ಅತ್ಯವಶ್ಯವಾಗಿದೆ ಎಂದರು.

ಶಿಕ್ಷಕರಾದ ಆರ್.ಡಿ. ಕಾಲಾಯಗರ, ಆರ್.ಡಿ. ಕಪ್ಪತ್ತನವರ, ಎಲ್. ತಿಪ್ಪನಾಯಕ್, ದೀಪಾ ಭೇಸ್ಮೆ, ನೇತ್ರಾ ಬದಾಮಿ ಸೇರಿದಂತೆ ವಿದ್ಯಾರ್ಥಿಗಳು ಇದ್ದರು. ಎಸ್.ಬಿ. ಅಣ್ಣಿಗೇರಿ ನಿರ್ವಹಿಸಿದರು. ಲಕ್ಷ್ಮೇಶ್ವರ ತಾಲೂಕಿನ ಎಲ್ಲ ಸರ್ಕಾರಿ ಕಚೇರಿ, ಶಾಲಾ-ಕಾಲೇಜುಗಳಲ್ಲಿ ರೇಣುಕಾಚಾರ್ಯರ ಜಯಂತಿ ಆಚರಿಸಲಾಯಿತು.

### ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿ ನಿಮಿತ್ತ ಮೆರವಣಿಗೆ

# ಶ್ರೀ ರೇಣುಕರು ಎಂದಿಗೂ ಜಗದ್ವಂದ್ಯರು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಆದಿ ಜಗದ್ಗುರು ಶ್ರೀ ರೇಣುಕರು ವೀರಶೈವ ಧರ್ಮದ ಸಂಸ್ಥಾಪಕರು. ಎಲ್ಲರನ್ನೂ ಪ್ರೀತಿಸಿ, ಗೌರವಿಸುವ ಗುಣ ಹೊಂದಿರುವ ಈ ಧರ್ಮದ ಸ್ಥಾಪನೆಯ ಮೂಲಕ ಅವರು ಧರ್ಮಕ್ಕೆ ಭದ್ರವಾದ ಬುನಾದಿಯನ್ನು ಹಾಕಿದರು. ಆದ್ದರಿಂದ ಶ್ರೀ ರೇಣುಕರು ಎಂದಿಗೂ ಜಗದ್ವಂದ್ಯರು ಎಂದು ನಿವೃತ್ತ ಶಿಕ್ಷಕ ಎಂ.ಎ. ಹಿರೇವಡೆಯರ ಹೇಳಿದರು.

ಪಟ್ಟಣದ ಶ್ರೀ ರೇಣುಕಾಚಾರ್ಯ ಪ್ರಾಥಮಿಕ ಶಾಲೆಯಲ್ಲಿ ಆಚರಿಸಲಾದ ಜಗದ್ಗುರು ಶ್ರೀ ರೇಣುಕಾಚಾರ್ಯ ಜಯಂತಿ ನಿಮಿತ್ತ ಹಮ್ಮಿಕೊಂಡಿದ್ದ ಮೆರವಣಿಗೆಗೆ ಚಾಲನೆ ನೀಡಿ ಅವರು ಮಾತನಾಡಿದರು.

ದ್ವಾಪರ ಯುಗದಲ್ಲಿ ಶ್ರೀ ರೇಣುಕರು ಆಂಧ್ರಪ್ರದೇಶದ ಕೊಲ್ಲಿಪಾಕಿ ಎಂಬಲ್ಲಿ ಅವತರಿಸಿದರು. ಅಲ್ಲಿಂದ ಅಗಸ್ತ್ಯ ಮುನಿಗೆ



ರಹಸ್ಯ ಬೋಧನೆ ನೀಡಲು ಅವರು ಈಗಿನ ಚಿಕ್ಕಮಗಳೂರು ಜಿಲ್ಲೆಯ ಮಲಯಾಚಲ ಎಂಬಲ್ಲಿ ಬಂದು ನೆಲೆನಿಂತರು. ಶ್ರೀ ಬಾಳೆಹೊನ್ನೂರು ಪೀಠವನ್ನು ಸ್ಥಾಪಿಸಿ ಆ ಮೂಲಕ ಧರ್ಮ ಜಾಗೃತಿಗೆ ಮುಂದಾದರು ಎಂದು ಹೇಳಿದರು.

ನಿವೃತ್ತ ಪ್ರಾಚಾರ್ಯ ಡಿ.ಎ. ಅರವಟಗಿಮಠ ಮಾತನಾಡಿ, ಶ್ರೀ ರೇಣುಕರು ತೋರಿದ ಲೀಲೆಗಳು ಅಪಾರ. ಅವುಗಳನ್ನು ಅರಿಯಬೇಕೆಂದರೆ ಚರಿತ್ರೆಯನ್ನು ಓದಬೇಕು. ಅವರ ಅವತಾರದಿಂದ ಈ ಭೂಮಿ ಪಾವನವಾಯಿತು ಎಂದರು.

ಡಾ. ಆರ್.ಕೆ. ಗಚ್ಚಿನಮಠ ಮಾತನಾಡಿ, ಶ್ರೀ ರೇಣುಕರು ತಮ್ಮ ಉಗಮಕ್ಕೆ ಅಂಗವನ್ನಾಧರಿಸಲಿಲ್ಲ. ಅವರು ಲಿಂಗದಿಂದ ಉದ್ಭವಿಸಿದರು. ಆದ್ದರಿಂದ ಅವರನ್ನು ಲಿಂಗೋದ್ಭವ ಜಗದ್ಗುರು ಎಂದು ಕರೆಯಲಾಗುತ್ತದೆ. ಅವರು ದೇವ ಸೃಷ್ಟಿಯ ಪರಮಾತ್ಮ ಸ್ವರೂಪರು. ದೇಹ ಸೃಷ್ಟಿಯ ಮಾನವರಲ್ಲ ಎಂದರು.

ಈ ಸಂದರ್ಭದಲ್ಲಿ ರುದ್ರಮುನಿ ಶಾಸ್ತ್ರಿಗಳು, ಪ.ಪಂ ಉಪಾಧ್ಯಕ್ಷ ಕುಮಾರಸ್ವಾಮಿ ಕೋರಧಾನ್ಯಮಠ, ಶರಣಪ್ಪ ಜುಟ್ಲದ, ಶಿವಯೋಗಿ ಜಕ್ಕಲಿ, ಈಶ್ವರ ಬೆಟಗೇರಿ, ಪ್ರಶಾಂತ ಹಿರೇಮಠ, ಬಸನಗೌಡ ಹಿರೆಗೌಡ್ರ, ವಿರುಪಾಕ್ಷಗೌಡ ಹಿರೆಗೌಡ್ರ, ಶಶಿಧರ ಓದ್ಸುಮಠ, ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ಅಧ್ಯಕ್ಷೆ ಕಸ್ತೂರಿ ಧನ್ನೂರ, ಮುಖ್ಯ ಶಿಕ್ಷಕಿ ನಿರ್ಮಲಾ ಹಿರೇಮಠ ಸೇರಿದಂತೆ ಶ್ರೀ ರೇಣುಕಾಚಾರ್ಯ ಪ್ರಾಥಮಿಕ ಶಾಲೆಯ ಸಿಬ್ಬಂದಿಯವರಿದ್ದರು.

> ಡಾ. ಕೆ.ಬಿ. ಧನ್ನೂರ ಮಾತನಾಡಿ, ಶ್ರೀ ಜಗದ್ಗುರು ರೇವಣಸಿದ್ಧರಾಗಿ ಅವತರಿಸಿದ ರೇಣುಕಾಚಾರ್ಯರು ವೀರಶೈವ ಧರ್ಮದ ಯುಗ ಪ್ರವರ್ತಕರಾಗಿ ಈ ನಾಡಿನ ಜನರಲ್ಲಿ ಧರ್ಮ ಜಾಗೃತಿಯನ್ನು ಮೂಡಿಸಿದರು. ಅಗಸ್ತ್ಯ ಮುನಿಗೆ ಶಕ್ತಿ ವಿಶಿಷ್ಠಾದ್ವೈತ ಸಿದ್ಧಾಂತವನ್ನು ಬೋಧಿಸಿದರು. ಇದನ್ನೇ ನಾವಿಂದು ಸಿದ್ಧಾಂತ ಶಿಖಾಮಣಿಯೆಂದು ಅಧ್ಯಯನ ಮಾಡುತ್ತೇವೆ. ಈ ಗ್ರಂಥದಲ್ಲಿ ಜೀವನಕ್ಕೆ ಬೇಕಾದ ಅನೇಕ ಮೌಲ್ಯಗಳಿವೆ. ಇವುಗಳನ್ನು ಅರ್ಥೈಸಿಕೊಂಡು ಬದುಕಿದರೆ ನಮ್ಮ ಬದುಕು ಬಂಗಾರವಾಗುತ್ತದೆ ಎಂದರು.

## ಆಸ್ಪತ್ರೆಯಲ್ಲಿ ನಮಾಜ್: ಮುಸ್ಲಿಂ ರೋಗಿಗಳಿಗೆ ಪ್ರತ್ಯೇಕ ವಾರ್ಡ್ ಗೆ ಒತ್ತಾಯಿಸಿದ ಬಿಜೆಪಿ ಶಾಸಕಿ

■ವಿಜಯಸಾಕ್ಷಿ ಸುದ್ದಿ, ಉತ್ತರ ಪ್ರದೇಶ

ಉತ್ತರ ಪ್ರದೇಶದ ಫಿರೋಜಾಬಾದ್‌ನ ಸರ್ಕಾರಿ ಆಸ್ಪತ್ರೆಯೊಂದರಲ್ಲಿ ವ್ಯಕ್ತಿಯೊಬ್ಬ ನಮಾಜ್ ಮಾಡುತ್ತಿರುವ ವಿಡಿಯೋವೊಂದು ತೀವ್ರ ವಿವಾದಕ್ಕೆ ಕಾರಣವಾಗಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಶೀಘ್ರವಾಗಿ ವೈರಲ್ ಆದ ಈ ದೃಶ್ಯಾವಳಿ ಹಿಂದೂ ಸಂಘಟನೆಗಳಿಂದ ತೀವ್ರ ಪ್ರತಿಕ್ರಿಯೆಗಳಿಗೆ ಕಾರಣವಾಗಿದ್ದು, ಮುಸ್ಲಿಂ ರೋಗಿಗಳಿಗೆ ಪ್ರತ್ಯೇಕ ವಾರ್ಡ್ ಬೇಕು ಎಂದು ಒತ್ತಾಯಿಸಿರುವ ಭಾರತೀಯ ಜನತಾ ಪಕ್ಷದ (ಬಿಜೆಪಿ) ಶಾಸಕಿ ಕೇತ್ಕಿ ಸಿಂಗ್ ಅವರ ವಿವಾದಾತ್ಮಕ ಹೇಳಿಕೆಯೂ ಇದಕ್ಕೆ ಕಾರಣವಾಗಿದೆ.

ಈ ವಿಡಿಯೋಗೆ ಪ್ರತಿಕ್ರಿಯಿಸಿದ ಸಿಂಗ್ ಅವರ ಬೇಡಿಕೆ ಚರ್ಚೆಯನ್ನು ತೀವ್ರಗೊಳಿಸಿದೆ. "ಹೋಳಿ, ರಾಮನವಮಿ ಮತ್ತು ದುರ್ಗಾ ಪೂಜೆಯಲ್ಲಿ ಮುಸ್ಲಿಮರಿಗೆ ಸಮಸ್ಯೆ ಇದೆ. ಬಹುಶಃ ಅವರಿಗೆ ಹಿಂದೂಗಳ ಜೊತೆ-ಗೆ ಚಿಕಿತ್ಸೆ ಪಡೆಯುವ ಸಮಸ್ಯೆಯೂ ಇರಬಹುದು. ಮುಸ್ಲಿಮರಿಗೆ ಪ್ರತ್ಯೇಕವಾಗಿ ಚಿಕಿತ್ಸೆ ನೀಡಲು ಸಾಧ್ಯವಾಗುವಂತೆ ಮಹಾರಾಜ್ ಜಿ (ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್) ಅವರನ್ನು ಪ್ರತ್ಯೇಕ ವಾರ್ಡ್ ಸ್ಥಾಪಿಸುವಂತೆ ನಾನು ವಿನಂತಿಸುತ್ತೇನೆ. ಅವರು ನಮ್ಮ ಮೇಲೆ ಉಗುಳಿದರೆ ಏನಾಗುತ್ತದೆ ಎಂದು ಯಾರಿಗೆ ತಿಳಿದಿದೆ? ನಾವು ನಮ್ಮ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳಬೇಕು" ಎಂದು ಅವರು ಹೇಳಿದರು. ಅವರ ಹೇಳಿಕೆಯನ್ನು ವ್ಯಾಪಕವಾಗಿ ಟೀಕಿಸಲಾಗಿದೆ, ಅನೇಕರು ಅವರು ಧಾರ್ಮಿಕ ಆಧಾರದ ಮೇಲೆ ವಿಭಜನೆಯನ್ನು ಉತ್ತೇಜಿಸುತ್ತಿದ್ದಾರೆ ಎಂದು ಆರೋಪಿಸಿದ್ದಾರೆ.

# ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ವಿಜಯಸಾಕ್ಷಿ ಸುದ್ದಿ, ಗದಗ

2024-25ನೇ ಸಾಲಿನಲ್ಲಿ ಮೆಟ್ರಿಕ್ ನಂತರದ ಕೋರ್ಸ್‌ಗಳಲ್ಲಿ ಓದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಶುಲ್ಕ ಮರುಪಾವತಿ (ವೃತ್ತಿಪರ ಪದವಿ, ಸ್ನಾತಕೋತ್ತರ ಪದವಿ, ವೃತ್ತಿಪರ ಸ್ನಾತಕೋತ್ತರ ಪದವಿ ಮತ್ತು ನರ್ಸಿಂಗ್ ಕೋರ್ಸುಗಳಿಗೆ ಮಾತ್ರ) ಕಾರ್ಯಕ್ರಮದ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ಮಾರ್ಚ್ 31ರವರೆಗೆ ವಿಸ್ತರಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಐಸಿಸಿ ಚಾಂಪಿಯನ್ಸ್ ಟ್ರೋಫಿ ವಿಜಯೋತ್ಸವ : ಯುವಕರ ತಲೆ ಬೋಳಿಸಿ ವಿಕೃತಿ ಮೆರೆದ ಪೊಲೀಸರು

■ವಿಜಯಸಾಕ್ಷಿ ಸುದ್ದಿ, ಮಧ್ಯ ಪ್ರದೇಶ

ಮಾರ್ಚ್ 9ರಂದು ಐಸಿಸಿ ಚಾಂಪಿಯನ್ಸ್ ಟ್ರೋಫಿಯಲ್ಲಿ ಭಾರತ ಜಯಗಳಿಸಿದ ಬಳಿಕ ಮಧ್ಯ ಪ್ರದೇಶದ ದೇವಾಸ್‌ನಲ್ಲಿ ನಡೆದ ಸಂಭ್ರಮಾಚರಣೆ ವೇಳೆ, ಪೊಲೀಸ್ ಸಿಬ್ಬಂದಿಯೊಂದಿಗೆ ಘರ್ಷಣೆ ನಡೆಸಿದ ಆರೋಪದ ಮೇಲೆ ಬಂಧನಕ್ಕೊಳಗಾದ ಒಂಬತ್ತು ಯುವಕರ ತಲೆ ಬೋಳಿಸಿ ವಿಕೃತಿ ಮೆರೆದ ಬಗ್ಗೆ ವರದಿಯಾಗಿದೆ.

ಪೊಲೀಸರು ಬಂಧಿತ ಯುವಕರ ತಲೆ ಬೋಳಿಸಿ, ಅವರನ್ನು ರಸ್ತೆಯಲ್ಲಿ ಮೆರವಣಿಗೆ ಮಾಡಿದ್ದಾರೆ ಎನ್ನಲಾಗಿದ್ದು, ಮಂಗಳವಾರ (ಮಾ.12) ಈ ಕುರಿತ ವಿಡಿಯೋಗಳು ವೈರಲ್ ಆದ ಬಳಿಕ ಆಕ್ರೋಶ ಭುಗಿಲೆದ್ದಿದೆ. ಪೊಲೀಸರ ಕ್ರಮವನ್ನು ದೇವಾಸ್ ಬಿಜೆಪಿ ಶಾಸಕಿ ಗಾಯತ್ರಿ ರಾಜೇ ಪವಾರ್ ಖಂಡಿಸಿದ್ದು, "ಪೊಲೀಸರು ಅಮಾಯಕರನ್ನು ಬಂಧಿಸಿದ್ದಾರೆ. ಬಂಧನದಲ್ಲಿರುವವರು ನಿರಪರಾಧಿಗಳು" ಎಂದಿದ್ದಾರೆ.

ದೇವಾಸ್ ಪೊಲೀಸ್ ವರಿಷ್ಠಾಧಿಕಾರಿ ಪುನೀತ್ ಗೆಹ್ಲೋಡ್ ಅವರನ್ನು ಭೇಟಿಯಾದ ಶಾಸಕಿ, ಈ ವಿಷಯದ ಬಗ್ಗೆ ಸಮಗ್ರ ತನಿಖೆ ನಡೆಸುವಂತೆ ಮನವಿ ಮಾಡಿದ್ದಾರೆ.

### ಕೃಷಿ ಸಮ್ಮೇಳನ, ಕಾಫಿ-ಅಡಿಕೆ ಬೆಳೆಗಾರರ ಹಿತ ಚಿಂತನ-ಮಂಥನ ಸಮಾರಂಭದಲ್ಲಿ ರಂಭಾಪುರಿ ಶ್ರೀಗಳು

# ರೈತರು ಆತ್ಮಹತ್ಯೆಯಂತಹ ಕಾರ್ಯಕ್ಕೆ ಮುಂದಾಗದಿರಿ

■ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

ಭಾರತ ಹಳ್ಳಿಗಳ ದೇಶ. ಹಳ್ಳಿಗಳ ಉದ್ಧಾರವಾದರೆ ದೇಶ ಉದ್ಧಾರವಾಗುವುದರಲ್ಲಿ ಅನುಮಾನವಿಲ್ಲ. ನೂರಕ್ಕೆ ಎಪ್ಪತ್ತರಷ್ಟು ಜನ ಕೃಷಿಯನ್ನೇ ಅವಲಂಬಿಸಿದ್ದಾರೆ. ಶ್ರಮದಿಂದ ಬೆವರು ಸುರಿಸಿ ದುಡಿದರೆ ಭೂತಾಯಿ ಕೈ ಹಿಡಿಯುವುದರಲ್ಲಿ ಯಾವುದೇ ಸಂಶಯವಿಲ್ಲ. ದೇಶ ಸಂರಕ್ಷಣೆಗಾಗಿ ಗಡಿ ಕಾಯುವ ಸೈನಿಕ ಮತ್ತು ಅನ್ನ ಕೊಡುವ ರೈತನನ್ನು ಯಾವತ್ತೂ ಮರೆಯಬಾರದೆಂದು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ನರಸಿಂಹರಾಜಪುರ ತಾಲೂಕಾ ಪತ್ರಕರ್ತರ ಸಂಘದಿಂದ ಜರುಗಿದ ಕೃಷಿ ಸಮ್ಮೇಳನ ಹಾಗೂ ಕಾಫಿ-ಅಡಿಕೆ ಬೆಳೆಗಾರರ ಹಿತ ಚಿಂತನ-ಮಂಥನ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಭೂಮಿಯಲ್ಲಿ ಅದ್ಭುತ ಶಕ್ತಿಯಿದೆ. ಭೂತಾಯಿ ಮಡಿಲಿಗೆ ಹಿಡಿ ಕಾಳು ಹಾಕಿದರೆ ಖಂಡಗ ಕಾಳು ಕೊಡುತ್ತಾಳೆ. ಮಲೆನಾಡಿನ ಪ್ರಾಂತ್ಯದಲ್ಲಿ ಕಾಫಿ ಮತ್ತು ಅಡಿಕೆ ಬೆಳೆ ಮುಖ್ಯವಾದವುಗಳು. ಕೃಷಿ ಮಾಡುವ ರೈತ ಏನೇ ಸವಾಲುಗಳು ಬಂದರೂ ಅವುಗಳನ್ನು ಎದುರಿಸಿ ಪರಿಹಾರಗಳನ್ನು ಕಂಡುಕೊಳ್ಳಬೇಕಾಗುತ್ತದೆ. ರೈತರು ಕಷ್ಟ



ಬಂದಾಗ ಆತ್ಮಸ್ಥೈರ್ಯ ಕಳೆದುಕೊಳ್ಳಬಾರದು. ಆತ್ಮಹತ್ಯೆಯಂತಹ ಕಾರ್ಯಕ್ಕೆ ಕೈ ಹಾಕಬಾರದು ಎಂದರು.

ಬೀರೂರು ರುದ್ರಮುನಿ ಶಿವಾಚಾರ್ಯ ಸ್ವಾಮಿಗಳು ನೇತೃತ್ವ ವಹಿಸಿ ಈ ವರ್ಷದ ಜಾತ್ರಾ ಮಹೋತ್ಸವದಲ್ಲಿ ವೈವಿಧ್ಯಮಯವಾದ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದು ಶ್ರೀ ರಂಭಾಪುರಿ ಜಗದ್ಗುರುಗಳ ದೂರ ದೃಷ್ಟಿಗೆ ಸಾಕ್ಷಿಯಾಗಿದೆ. ಕೃಷಿ ಮೇಳದಲ್ಲಿ ರೈತರು ಪಾಲ್ಗೊಂಡು ಹೆಚ್ಚಿನ ಜ್ಞಾನವನ್ನು ಪಡೆಯಲು ಮುಂದಾಗಬೇಕೆಂದರು.

ಎನ್.ಆರ್. ಪುರ ತಾಲೂಕಾ ಪತ್ರಕರ್ತರ ಸಂಘದ ಅಧ್ಯಕ್ಷ ಸಚಿನ್ ಕುಮಾರ್ ಬಿ.ಎಸ್. ಪ್ರಾಸ್ತಾವಿಕ ಮಾತನಾಡಿ, ಈ ಭಾಗದ ಕಾಫಿ-ಅಡಿಕೆ ಬೆಳೆಗಾರರ ಹಿತ ಚಿಂತನ-ಮಂಥನದ ಉದ್ದೇಶ ಹೊಂದಿ ಈ ಕೃಷಿ ಸಮ್ಮೇಳನ ಏರ್ಪಡಿಸಿದೆ. ಈ ಸಮಾರಂಭದ ಜೊತೆಗೆ ಮತ್ತೆರಡು ಗೋಷ್ಠಿಗಳನ್ನು ಹಮ್ಮಿಕೊಳ್ಳಲಾಗಿದೆ. ಕೃಷಿಕರು ಇದರ ಪ್ರಯೋಜನ ಪಡೆಯಬೇಕು ಎಂದರು.

ಮಾಜಿ ಸಚಿವ ಡಿ.ಎನ್. ಜೀವರಾಜ್, ಕಾಫಿ ಮಂಡಳಿ ಅಧ್ಯಕ್ಷ ಎಂ.ಜೆ. ದಿನೇಶ್ ದೇವವೃಂದ, ಧರ್ಮರಾಜ ಹೊಂಕ್ರವಲ್ಲಿ, ಹೆಚ್.ಬಿ. ರಾಜಗೋಪಾಲ್, ರವಿಚಂದ್ರ, ಕೊರಟಗೆರೆ ಪ್ರಕಾಶ್ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದರು.

> ಸಮಾರಂಭವನ್ನು ಉದ್ಘಾಟಿಸಿದ ಶಾಸಕ, ಕರ್ನಾಟಕ ಬಿ.ಜೆಪಿ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಮಾತನಾಡಿ, ಶ್ರೀ ಜಗದ್ಗುರು ರೇಣುಕಾಚಾರ್ಯರ ಕ್ರಾಂತಿ ಸಾಮಾನ್ಯವಾದುದಲ್ಲ. ಸಕಲ ಜೀವಾತ್ಮರನ್ನು ಉದ್ಧರಿಸಿದ ಮಹಾನ್ ಆಚಾರ್ಯ ಪುರುಷರು. ಅವರು ಕೊಟ್ಟ ತತ್ವ ಸಂದೇಶ, ಕಾಯಕ ಜೀವನದ ಹಿರಿಮೆ ನಮ್ಮೆಲ್ಲರ ಪ್ರಗತಿಗೆ ಅಡಿಪಾಯ. ಜಾತ್ರಾ ಮಹೋತ್ಸವ ಸಂದರ್ಭದಲ್ಲಿ ಕೃಷಿ ಸಮ್ಮೇಳನ ಹಮ್ಮಿಕೊಂಡಿರುವುದು ಶ್ರೀ ರಂಭಾಪುರಿ ಪೀಠದ ರೈತ ಪರವಾದ ಕಳಕಳಿ ವೇದ್ಯವಾಗುತ್ತದೆ ಎಂದರು.

ಕೃಷಿ ತಜ್ಞ ಚಂದ್ರಶೇಖರ ನಾರಣಾಪುರ ಹಾಗೂ ವೀರಭದ್ರಗೌಡ ಕೆ.ವಿ. ಕುಪ್ಪಗೋಡು ಇವರಿಗೆ ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ತೆಂಡೆ-ಕೆರೆ, ಧನಗೂರು, ಸಂಗೊಳ್ಳಿ, ಬೇರುಗಂಡಿ, ಅಚಲೇರಿ, ಹಂಪಸಾಗರ, ಕೆಂಭಾವಿ, ದೊಡ್ಡಸಗರ, ಸಿದ್ಧರಬೆಟ್ಟ, ಶ್ರೀಗಳು ಉಪಸ್ಥಿತರಿದ್ದರು.

ವನಮಾಲಾ ಮೃತ್ಯುಂಜಯ ಅಲ್ದೂರು ಸರ್ವರನ್ನು ಸ್ವಾಗತಿಸಿದರು. ಶಾಂತಾ ಆನಂದ ಪ್ರಾರ್ಥಿಸಿದರು. ಹೇಮಲತಾ ಶಿಕ್ಷಕರು ಬಿಕ್ಕೋಡು ಹಾಗೂ ಲೀಲಾವತಿ ಕೆ.ಎಸ್. ನಿರೂಪಿಸಿದರು. ಪ್ರವೀಣ ಬೆಳಗೊಳ ರೈತಗೀತೆ ಹಾಡಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka